# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 44 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 29–08–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 44 | Title- Code: KARKAN 28269 | Chitradurga | Date: 29-08-2024 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಒಳಮೀಸಲು ಜಾರಿಗೊಳಿಸಲು ಮಾದಿಗ ಮುಖಂಡರ ನಿಯೋಗ ಒತ್ತಾಯ 2

ಶಾಂತಿಯಿಂದ ಗೌರಿ ಗಣೇಶ, ಈದ್ ಮಿಲಾದ್ ಹಬ್ಬ ಆಚರಿಸಿ: ಜಿಲ್ಲಾಧಿಕಾರಿ 3

ಗೌರಸಮುದ್ರ ಮಾರಮ್ಮದೇವಿ ಹುಂಡಿಯಲ್ಲಿ 10.66.441 ಹಣ ಸಂಗ್ರಹ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಜಿಲ್ಲಾ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ: ಯಶಸ್ವಿ ಆಯೋಜನೆಗೆ ಜಿ.ಪಂ ಸಿಇಒ ಸೂಚನೆ

» **ಚಿತ್ರದುರ್ಗ**

ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿಯವರ 155 ನೇ ಜನ್ಮ ದಿನಾಚರಣೆ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವ ಜನರಲ್ಲಿ ಮಹಾತ್ಮಾ ಗಾಂಧೀಜಿಯವರ ಬದುಕು, ಜೀವನ ಸಾಧನೆ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿಪೂರ್ವ, ಪದವಿ ಹಾಗೂ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಹೆಚ್ಚಿನ ಅರಿವು ಮೂಡಿಸುವಂತೆ ಪ್ರೇರೇಪಿಸುವ ನಿಟ್ಟಿನಲ್ಲಿ ಜಿಲ್ಲಾ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿದ್ದು, ಜಿಲ್ಲೆಯಲ್ಲಿ ಪ್ರಬಂಧ ಸ್ಪರ್ಧೆಯನ್ನು ಯಶಸ್ವಿಯಾಗಿ ಆಯೋಜಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಸೂಚನೆ ನೀಡಿದರು.



ನಗರದ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ಬುಧವಾರ ಈ ಕುರಿತು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಏರ್ಪಡಿಸಲಾಗಿರುವ ಜಿಲ್ಲಾ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪಾಲ್ಗೊಳ್ಳುವಂತೆ ಮಾಡುವುದರ ಮೂಲಕ ಜಿಲ್ಲೆಯಲ್ಲಿ ಅತ್ಯುತ್ತಮವಾಗಿ ಆಯೋಜಿಸಬೇಕು. ಜಿಲ್ಲೆಯ ಪ್ರತಿಯೊಂದು ತಾಲ್ಲೂಕುಗಳಿಂದಲೂ ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಮತ್ತು ಖಾಸಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸುವಂತಾಗಬೇಕು. ಈ ಬಗ್ಗೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಮುತುವರ್ಜಿ ವಹಿಸಿ, ಸ್ಪರ್ಧೆಯನ್ನು ಯಶಸ್ವಿಗೊಳಿಸಬೇಕು

ಜಿಲ್ಲೆಯಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಗೆ ಹೆಚ್ಚಿನ ವಿದ್ಯಾರ್ಥಿಗಳು ಭಾಗವಹಿಸಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲ ಖಾಸಗಿ ಮತ್ತು ಸರ್ಕಾರಿ ಪ್ರೌಢಶಾಲೆ, ಕಾಲೇಜು ಹಂತದಲ್ಲಿಯೇ ಸ್ಪರ್ಧೆ ಏರ್ಪಡಿಸಿ, ಸ್ಪರ್ಧೆಯ ಕುರಿತು ಸಾಕಷ್ಟು ಮುಂಚಿತವಾಗಿ ವಿದ್ಯಾರ್ಥಿಗಳಿಗೆ ತಿಳಿಸಿ, ಅವರು ಸ್ಪರ್ಧೆಗೆ ಸಿದ್ಧತೆ ಮಾಡಿಕೊಳ್ಳುವಂತೆ ಕ್ರಮ ವಹಿಸಬೇಕು.

ಪ್ರೌಢಶಾಲಾ ವಿಭಾಗದ ಸ್ಪರ್ಧೆಯಲ್ಲಿ ಅತ್ಯುತ್ತಮ 03 ಪ್ರಬಂಧದ ಫಲಿತಾಂಶವನ್ನು ಡಿಡಿಪಿಐ, ಡಿಡಿಪಿಯು ಹಾಗೂ ಪದವಿ–ಸ್ನಾತಕೋತ್ತರ ಪದವಿ ವಿಭಾಗದ ಫಲಿತಾಂಶವನ್ನು ಚಿತ್ರದುರ್ಗ ಸರ್ಕಾರಿ ಕಲಾ ಪ್ರಾಂಶುಪಾಲರು ಸೆಪ್ಟೆಂಬರ್ 06 ರೊಳಗೆ ಜಿಲ್ಲಾ ವಾರ್ತಾಧಿಕಾರಿಗಳಿಗೆ ತಲುಪಿಸಬೇಕು ಎಂದು ಸೂಚನೆ ನೀಡಿದರು.

ಸ್ಪರ್ಧೆಯ ನಿಬಂಧನೆಗಳನ್ನು ತಪ್ಪದೆ ಪಾಲಿಸಬೇಕು. ಪ್ರೌಢಶಾಲೆ ವಿಭಾಗ, ಪದವಿಪೂರ್ವ ವಿಭಾಗ, ಪದವಿ–ಸ್ನಾತಕೋತ್ತರ ಪದವಿ ವಿಭಾಗಕ್ಕೆ ಪ್ರತ್ಯೇಕ ಬಹುಮಾನಗಳಿರುವುದರಿಂದ, ಪದವಿಪೂರ್ವ ವಿಭಾಗ, ಪದವಿ–ಸ್ನಾತಕೋತ್ತರ ಪದವಿ ವಿಭಾಗದ ಸ್ಪರ್ಧೆಯಲ್ಲಿ ಪ್ರಬಂಧಗಳನ್ನು ಅತ್ಯಂತ ಎಚ್ಚರಿಕೆಯಿಂದ ಮೌಲ್ಯಮಾಪನ ಮಾಡಿಸಿ, ಅತ್ಯುತ್ತಮ ಪ್ರಬಂಧ ಬರೆದು ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನಕ್ಕೆ ಆಯ್ಕೆಯಾದವರ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ ವಿವರವುಳ್ಳ ಫಲಿತಾಂಶ ಮತ್ತು ಬಹುಮಾನಕ್ಕೆ ಆಯ್ಕೆಯಾದ ಮೂಲ ಪ್ರಬಂಧಗಳ ಪ್ರತಿಗಳನ್ನು, ಇದರ ಜೊತೆಗೆ ಜಿಲ್ಲೆಯಲ್ಲಿ ಒಟ್ಟಾರೆ ಸ್ಪರ್ಧೆಯಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳ ತಾಲ್ಲೂಕುವಾರು ಸಂಖ್ಯಾ ವಿವರವನ್ನು ಕ್ರೋಢೀಕರಿಸಿ ಜಿಲ್ಲಾ ವಾರ್ತಾಧಿಕಾರಿಗಳಿಗೆ ತಪ್ಪದೆ ತಲುಪಿಸಬೇಕು ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸೂಚನೆ ನೀಡಿದರು.

ಜಿಲ್ಲಾ ವಾರ್ತಾಧಿಕಾರಿ ಬಿ.ವಿ .ತುಕಾರಾಂರಾವ್ ಮಾತನಾಡಿ, ಮಹಾತ್ಮಾ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗಾಗಿ ಅವರು ನಡೆಸಿದ ಪ್ರಯೋಗಗಳು ಮೊದಲಾದ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ ಮತ್ತು ಸ್ನಾತಕೋತ್ತರ ಪದವಿ ಹಂತದ ವಿದ್ಯಾರ್ಥಿಗಳಿಗೆ ಹೀಗೆ ಒಟ್ಟು 03 ವಿಭಾಗಗಳಲ್ಲಿ "ಬಾಪೂಜಿ ಪ್ರಬಂಧ ಸ್ಪರ್ಧೆ"ಯನ್ನು ಆಯೋಜಿಸಲು ಉದ್ದೇಶಿಸಲಾಗಿದೆ. ಕಳೆದ ವರ್ಷವೂ ಇಂತಹದೇ ಸ್ಪರ್ಧೆಯನ್ನು ವಿವಿಧ ಇಲಾಖೆಯವರ ಸಹಕಾರದೊಂದಿಗೆ ಜಿಲ್ಲೆಯಲ್ಲಿ ಅತ್ಯಂತ ಯಶಸ್ವಿಯಾಗಿ ಆಯೋಜಿಸಿ, ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ನೀಡಲಾಗಿದೆ ಎಂದು ತಿಳಿಸಿದರು.

ಈ ಬಾರಿಯೂ ಸ್ಪರ್ಧೆಯನ್ನು ಜಿಲ್ಲೆಯಾದ್ಯಂತ ಆಯಾ ಶಾಲೆ, ಕಾಲೇಜುಗಳಲ್ಲಿಯೇ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಏರ್ಪಡಿಸಬೇಕಾಗಿರುತ್ತದೆ. ಜಿಲ್ಲಾ ಮಟ್ಟದಲ್ಲಿ ಪ್ರತಿ ವಿಭಾಗದಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನ ವಿಜೇತರ ಪ್ರಬಂಧಗಳನ್ನು ರಾಜ್ಯ ಮಟ್ಟದ ಸ್ಪರ್ಧೆಗೆ ಬೆಂಗಳೂರಿಗೆ ರವಾನಿಸಲಾಗುವುದು. ಜಿಲ್ಲೆಯ ಎಲ್ಲ ತಾಲ್ಲೂಕುಗಳ ಸರ್ಕಾರಿ ಮತ್ತು ಖಾಸಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಈ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವಂತಾಗಬೇಕು, ಇದಕ್ಕಾಗಿ ವಿವಿಧ ಇಲಾಖೆಗಳ ಸಹಕಾರ ಅಗತ್ಯವಾಗಿದೆ. ಸಂಬಂಧಿಸಿದ ಅಧಿಕಾರಿಗಳು ಯಶಸ್ವಿಗೊಳಿಸಲು ಸೂಕ್ತ ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪುಟ್ಟಸ್ವಾಮಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್, ಡಯಟ್ ಪ್ರಾಚಾರ್ಯ ಎಂ. ನಾಸಿರುದ್ದೀನ್, ಶಿಕ್ಷಣ ಇಲಾಖೆ ಡಿವೈಪಿಸಿ ಸಿ.ಎಸ್. ವೆಂಕಟೇಶ್, ಸರ್ಕಾರಿ ವಿಜ್ಞಾನ ಕಾಲೇಜು ಪ್ರಾಂಶುಪಾಲ ಪ್ರೊ. ಸಿದ್ರಾಮ ಚನಗೊಂಡ, ಜಿ.ಆರ್. ಹಳ್ಳಿಯ ದಾವಣಗೆರೆ ವಿ.ವಿ.ಯ ಡಾ. ಸುಂದರಂ, ಸರ್ಕಾರಿ ಕಲಾ ಕಾಲೇಜಿನ ಡಾ. ವಿ. ಪ್ರಸಾದ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರು ಇದ್ದರು.

## ರಿಕ್ಷಾಗೆ ಖಾಸಗಿ ಬಸ್ ಡಿಕ್ಕಿ: ಸ್ಥಳದಲ್ಲೇ ಮಹಿಳೆ ಸಾವು

» **ಚಳ್ಳಕೆರೆ**

ನಗರದ ಚಿತ್ರದುರ್ಗ ರಸ್ತೆಯ ಇಮಾಂಪುರ ಗೇಟ್ ಬಳಿ ಚಿತ್ರದುರ್ಗದಿಂದ ಬಳ್ಳಾರಿಗೆ ಚಲಿಸುತ್ತಿದ್ದ ಖಾಸಗಿ ಬಸ್ ಆಟೋರಿಕ್ಷಾ ಡಿಕ್ಕಿ ಹೊಡೆದ ಪರಿಣಾಮ ಆಟೋರಿಕ್ಷಾದಲ್ಲಿ ಪ್ರಯಾಣಿಸುತ್ತಿದ್ದ ಗಂಗಮ್ಮ(45) ತಲೆ, ಎದೆ, ಕೈಕಾಲಿಗೆ ಪೆಟ್ಟು ಬಿದ್ದು ರಕ್ತಸ್ರಾವದಿಂದ ಸ್ಥಳದಲ್ಲೇ ಮೃತಪಟ್ಟಿರುತ್ತಾಳೆ. ಆಟೋರಿಕ್ಷಾ ಚಾಲಕ ಈಶ್ವರಪ್ಪ



ತೀರ್ವಗಾಯಗೊಂಡು ಜಿಲ್ಲಾ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ಈಶ್ವರಪ್ಪ ತನ್ನ ಅಕ್ಕ ಗಂಗಮ್ಮಳನ್ನು ಆಟೋರಿಕ್ಷಾದಲ್ಲಿ ಸಂಬಂಧಿಕರ ಮನೆಗೆ ಮಧ್ಯಾಹ್ನದ ವೇಳೆಯಲ್ಲಿ ಕರೆದುಕೊಂಡು ಹೋಗುವಾಗ ಚಿತ್ರದುರ್ಗ ಕಡೆಯಿಂದ ಬಂದ ಖಾಸಗಿ ಬಸ್ ಆಟೋರಿಕ್ಷಾಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿ ರಂಭಸಕ್ಕೆ ಆಟೋರಿಕ್ಷಾದ ಹಿಂಭಾಗದಲ್ಲಿ ಕುಳಿತಿದ್ದ ಗಂಗಮ್ಮ ನೆಲಕ್ಕೆ ಬಿದ್ದು ಮೃತಪಟ್ಟಿರುತ್ತಾಳೆ. ಈಶ್ವರಪ್ಪನಿಗೂ ಸಹ ಪೆಟ್ಟಾಗಿದ್ದು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಜಿಲ್ಲಾ ಆಸ್ಪತ್ರೆಗೆದಾಖಲಿಸಲಾಗಿದೆ.ಚಳ್ಳಕೆರೆ ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.



## ಕಿಶೋರಾವಸ್ಥೆ ನಿಷೇಧ ಜಾಗೃತಿ

**ಚಿತ್ರದುರ್ಗ:** ಹೊಸದುರ್ಗ ಪಟ್ಟಣದಲ್ಲಿ ಬುಧವಾರ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ನಿಷೇಧ ಕಾಯ್ದೆಯಡಿಯಲ್ಲಿ ವಿವಿಧ ವಾಣಿಜ್ಯ ಸಂಸ್ಥೆಗಳಾದ ಗ್ಯಾರೇಜ್, ಹೋಟೆಲ್, ಮರದ ಶಾಮಿಲ್‌ಗಳಲ್ಲಿ ತಪಾಸಣೆ ನಡೆಸಿ, ಮಾಲೀಕರಿಗೆ ಜಾಗೃತಿ ಮೂಡಿಸಲಾಯಿತು. ತಪಾಸಣಾ ಸಂದರ್ಭದಲ್ಲಿ ಓರ್ವ ಬಾಲಕನು ಸುತ್ತಾಡುತ್ತಿರುವುದನ್ನು ಗಮನಿಸಿ ಆ ಮಗುವನ್ನು ತಂದೆಯ ಜೊತೆಯಲ್ಲಿ ಮೌಲಾನ ಆಜಾದ್ ಸರ್ಕಾರಿ ಶಾಲೆಗೆ ದಾಖಲು ಮಾಡಲಾಯಿತು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಕಾಂತರಾಜು ಅವರು ಬಾಲಕನಿಗೆ ಸಮವಸ್ತ್ರ, ಪುಸ್ತಕ, ಬ್ಯಾಗ್, ಶೂಗಳನ್ನು ವಿತರಣೆ ಮಾಡಿದರು. ತಂಡದಲ್ಲಿ ಹೊಸದುರ್ಗ ವೃತ್ತ ಕಾರ್ಮಿಕ ನಿರೀಕ್ಷಕ ಡಿ.ರಾಜಣ್ಣ, ಜಿಲ್ಲಾ ಬಾಲಕಾರ್ಮಿಕ ಯೋಜನೆ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ನವೀನ್ ಕುಮಾರ್, ಇಸಿಒ ಸೋಮಶೇಖರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸಿಬ್ಬಂದಿ ಇದ್ದರು.

**ಪ್ರಮುಖ ಸುದ್ದಿ**

### ಹಿಂದೂಮಹಾಗಣಪತಿ ಉತ್ಸವ : ಗೋಪೂಜೆ, ಧ್ವಜಪೂಜೆಯೊಂದಿಗೆ ಚಾಲನೆ

# ಭಕ್ತಿ, ಶ್ರದ್ಧೆಯಿಂದ ಗಣೇಶ ಪೂಜಿಸಿ ನೆಮ್ಮದಿ ಕಂಡುಕೊಳ್ಳಣ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಹಿಂದೂಮಹಾಗಣಪತಿ ಉತ್ಸವಸೆ.7ರಿಂದ23ರತನಕನಡೆಯಲಿದ್ದು, ಭಕ್ತಾಧಿಗಳು ಕಾರ್ಯಕ್ರಮದ ಯಶಸ್ವಿಗೆ ಸಹಕಾರ ನೀಡಬೇಕೆಂದು ಉತ್ಸವ ಸಮಿತಿ ಅಧ್ಯಕ್ಷ, ವಾಣಿಜ್ಯೋದ್ಯಮಿ ಕೆ.ಸಿ.ನಾಗರಾಜು ಮನವಿ ಮಾಡಿದರು.

ಅವರು, ಬುಧವಾರ ಇಲ್ಲಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ವಿಶ್ವಹಿಂದೂಪರಿಷತ್ ಮತ್ತು ಭಜರಂಗದಳ ಹಮ್ಮಿಕೊಂಡಿದ್ದ ಹಿಂದೂಮಹಾಗಣಪತಿ ಉತ್ಸವದ ಧ್ವಜ, ಗೋಪೂಜೆ ಚಾಲನೆ ನೀಡಿ ಮಾತನಾಡಿದರು. ವಿಶ್ವಹಿಂದೂಪರಿಷತ್ ಜಿಲ್ಲಾಧ್ಯಕ್ಷ ಕೊಂಡ್ಲಹಳ್ಳಿ ಷಡಾಕ್ಷರಪ್ಪ ಕಾರ್ಯಕ್ರಮದಲ್ಲಿಭಾಗವಹಿಸಿಶುಭಹಾರೈಸಿ ಮಾತನಾಡಿ,ವಿಶ್ವಹಿಂದೂಪರಿಷತ್ ಹಾಗೂ ಭಜರಂಗದಳ ಸಮಾಜದಲ್ಲಿ ಸಾಮರಸ್ಯ



ಮೂಡಿಸಲು ಈ ಕಾರ್ಯಕ್ರಮಗಳನ್ನು ಆಯೋಜಿಸುತ್ತಾ ಬಂದಿದೆ. ಗಣೇಶನ ಪೂಜೆಯಿಂದ ಶಾಂತಿ, ನೆಮ್ಮದಿ ನೆಲೆಸುತ್ತದೆ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಮೊದಲ ಪೂಜೆಯೇ ಶ್ರೀಗಣೇಶನಿಗೆ ಸಲ್ಲುತ್ತದೆ. ನಾವೆಲ್ಲರೂ ಗಣೇಶನ ಭಕ್ತರಾಗಿ ಅನುಗ್ರಹಕ್ಕೆ ಪಾತ್ರರಾಗೋಣವೆಂದರು.

ವಿಶ್ವಹಿಂದೂಪರಿಷತ್ ತಾಲ್ಲೂಕು ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ ಮಾತನಾಡಿ, ಕಳೆದ ಸುಮಾರು ಆರು ವರ್ಷಗಳಿಂದ ಈ ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ. ಭಕ್ತರು, ಸಾರ್ವಜನಿಕರು, ಸಂಘ ಸಂಸ್ಥೆಗಳ ಪ್ರತಿನಿಧಿಗಳು ಗಣೇಶನ ಉತ್ಸವಕ್ಕೆ ಎಲ್ಲಾ ರೀತಿಯ ಸಹಕಾರ ನೀಡುತ್ತಿದ್ದಾರೆ. ಸೆ.23ರಂದು ನಗರದಾದ್ಯಂತ ಬೃಹತ್ ಶೋಭಾಯಾತ್ರೆಯನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಬಾಳೆಮಂಡಿ ರಾಮದಾಸ್, ಹಿರಿಯ ಮುಖಂಡ ಸೋಮಶೇಖರ್‌ಮಂಡಿಮಠ, ಶಿವಪುತ್ರಪ್ಪ, ನಗರದ ಘಟಕದ ಅಧ್ಯಕ್ಷ ಯತೀಶ್, ಲಕ್ಷ್ಮಿ ಶ್ರೀವತ್ಸ, ಶುಭಸೋಮಶೇಖರ್, ಶುಭಸುರೇಶ್, ಮಹಂತೇಶ್, ಉಮೇಶ್, ಬಾಲಕೃಷ್ಣ, ಇತೇಶ್‌ಜೈನ್, ಪ್ರಕಾಶ್, ಮಹಂತೇಶ್, ಜಿ.ಕೃಷ್ಣಮೂರ್ತಿ, ನಾಗರಾಜು, ಶಶಿಧರ, ಮೋಹನ್, ಜಗದಾಂಭ, ಮಂಜುನಾಥ, ಹೊಸಮನೆಮನೋಜ್, ಮಾತೃಶ್ರೀ ಮಂಜುನಾಥ, ಬಾಬು, ಪುರೋಹಿತ ಪ್ರದೀಪ್‌ಭಟ್, ಪಾಲಯ್ಯ ಭಾಗವಹಿಸಿದ್ದರು.

**ಫಾಸ್ಟ್ ನ್ಯೂಸ್**


## ಬೆಳೆ ಸ್ಪರ್ಧೆಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024–25ನೇ ಸಾಲಿನ ಕೃಷಿ ಪ್ರಶಸ್ತಿ ಕಾರ್ಯಕ್ರಮದಡಿ ಮುಂಗಾರು ಮತ್ತು ಹಿಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಕೃಷಿ ಇಲಾಖೆಯ ಕೆ.ಕಿಸಾನ್ ಪೋರ್ಟಲ್‌ನಲ್ಲಿ ನೂತನವಾಗಿ ಕೃಷಿ ಪ್ರಶಸ್ತಿಗೆ ಅರ್ಜಿ ನಮೂನೆ ಅಳವಡಿಸಲಾಗಿರುತ್ತದೆ. ಸಿಟಿಜನ್ ಲಾಗಿನ್ ಅಥವಾ ಆರ್‌ಎಸ್‌ಕೆ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ, ಸೇವಾ ಕೇಂದ್ರ, ಸ್ವತಃ ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಕೆ.ಕಿಸಾನ್ ಪೋರ್ಟಲ್‌ನಲ್ಲಿ ಅಗತ್ಯ ದಾಖಲೆಗಳೊಂದಿಗೆ ಎಫ್‌ಐಡಿ, ಫಹಣಿ, ಆಧಾರ್ ಕಾರ್ಡ್, ಫೋಟೋ, ಜಾತಿ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಪಾಸ್‌ಬುಕ್ ಪ್ರತಿಯನ್ನು ಬಳಸಿಕೊಂಡು ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಚಿತ್ರದುರ್ಗ ಜಿಲ್ಲಾ ಮಟ್ಟಕ್ಕೆ ಶೇಂಗಾ (ಮಳೆಯಾಶ್ರಿತ), ಚಿತ್ರದುರ್ಗ ಮತ್ತು ಹೊಳಲ್ಕೆರೆ ತಾಲ್ಲೂಕು ಮಟ್ಟಕ್ಕೆ ಮುಸುಕಿನ ಜೋಳ (ಮಳೆ ಆಶ್ರಿತ), ಹೊಸದುರ್ಗ ತಾಲ್ಲೂಕು ಮಟ್ಟಕ್ಕೆ ರಾಗಿ (ಮಳೆ ಆಶ್ರಿತ) ಹಾಗೂ ಚಳ್ಳಕೆರೆ, ಹಿರಿಯೂರು ಮತ್ತು ಮೊಳಕಾಲ್ಮೂರು ತಾಲ್ಲೂಕು ಮಟ್ಟಕ್ಕೆ ಶೇಂಗಾ (ಮಳೆ ಆಶ್ರಿತ) ಬೆಳೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಜಿಲ್ಲಾ ಮಟ್ಟದ ಕೃಷಿ ಪ್ರಶಸ್ತಿಗೆ, ಪ್ರಥಮ ರೂ.30000, ದ್ವಿತೀಯ ರೂ.25000, ತೃತೀಯ ರೂ.20000 ಹಾಗೂ ತಾಲ್ಲೂಕು ಮಟ್ಟದ ಪ್ರಶಸ್ತಿಗೆ ಪ್ರಥಮ ರೂ.15000, ದ್ವಿತೀಯ ರೂ.10000 ಮತ್ತು ತೃತೀಯ ರೂ.5000 ಇರುವುದರಿಂದ ಈ ಅವಕಾಶ ಸದುಪಯೋಗ ಪಡಿಸಿಕೊಳ್ಳಬೇಕು. ಪ್ರಸಕ್ತ ಸಾಲಿನಿಂದ ಕೃಷಿ ಪ್ರಶಸ್ತಿಯಡಿ ಬೆಳೆ ಸ್ಪರ್ಧೆಗೆ ಅರ್ಜಿ ಶುಲ್ಕ ರದ್ದುಪಡಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

## ಪಡಿತರ ಇ-ಕೆವೈಸಿ: ಆ.31 ಅಂತಿಮ ಗಡುವು

» **ಚಿತ್ರದುರ್ಗ**



ಪಡಿತರ ಚೀಟಿದಾರರ ಇ–ಕೆವೈಸಿ ಸಂಗ್ರಹಣೆ ಮಾಡಿಸಲು ಆಗಸ್ಟ್ 31 ಅಂತಿಮ ಗಡುವು ನಿಗದಿಪಡಿಸಿದ್ದು, ಇ–ಕೆವೈಸಿ ಸಂಗ್ರಹಣೆಯಾಗಿಲ್ಲದ ಪಡಿತರ ಚೀಟಿದಾರರು ತಪ್ಪದೇ ಇ–ಕೆವೈಸಿ ಮಾಡಿಸಿಕೊಳ್ಳಬೇಕು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ. ಪಡಿತರ ಚೀಟಿದಾರರ ಇ.ಕೆ.ವೈ.ಸಿ ಸಂಗ್ರಹಣೆಯನ್ನು 2017ರಿಂದ ನ್ಯಾಯಬೆಲೆ ಅಂಗಡಿಗಳ ಮೂಲಕ ಸಂಗ್ರಹಣೆ ಮಾಡಲಾಗುತ್ತಿದೆ. ಚಿತ್ರದುರ್ಗ ಜಿಲ್ಲೆಯ ಇ–ಕೆ.ವೈ.ಸಿ ಸಂಗ್ರಹಣೆಯ ಪ್ರಗತಿಯನ್ನು ಪರಾಮರ್ಶೆ ಮಾಡಲಾಗಿ, ಇದುವರೆಗೂ ಜಿಲ್ಲೆಯಲ್ಲಿ ಅಂತ್ಯೋದಯ ಪಡಿತರ ಚೀಟಿ ಸದಸ್ಯರ ಶೇ.96.34 ಮತ್ತು ಆದ್ಯತಾ ಪಡಿತರ ಚೀಟಿ ಸದಸ್ಯರ ಶೇ.97.18 ಸೇರಿದಂತೆ ಒಟ್ಟು ಶೇ.97.07ರಷ್ಟು ಇ–ಕೆ.ವೈ.ಸಿ ಸಂಗ್ರಹಣೆ ಮಾಡಲಾಗಿದೆ. ಪಡಿತರ ಚೀಟಿಯಲ್ಲಿನ ಸದಸ್ಯರ ಇ–ಕೆ.ವೈ.ಸಿ ಸಂಗ್ರಹಣೆಯಾಗದೇ ಇದ್ದಲ್ಲಿ ಮುಂಬರುವ ದಿನಗಳಲ್ಲಿ ಅಂತಹ ಪಡಿತರ ಚೀಟಿಗಳು, ಸದಸ್ಯರುಗಳ ಹೆಸರುಗಳು ಪಡಿತರ ಚೀಟಿಗಳಿಂದ ಬಿಟ್ಟುಹೋಗುವ ಮತ್ತು ಆಹಾರಧಾನ್ಯ ಹಂಚಿಕೆ ಸ್ಥಗಿತಗೊಳ್ಳುವ ಸಂಭವವಿರುತ್ತದೆ. ಆದ್ದರಿಂದ ಇ–ಕೆ.ವೈ.ಸಿ ಸಂಗ್ರಹಣೆಯಾಗಿಲ್ಲದ್ದ ಪಡಿತರ ಚೀಟಿದಾರರು, ಸದಸ್ಯರು ಇದೇ ಆಗಸ್ಟ್ 31ರೊಳಗೆ ತಾವು ರಾಜ್ಯದ, ಜಿಲ್ಲೆಯ, ತಾಲ್ಲೂಕಿನ, ಹಳ್ಳಿಯ, ತಾವು ಇರುವ ಸ್ಥಳದಲ್ಲಿಯೇ ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ತಮ್ಮ ಜೀವಮಾಪನ ನೀಡಿ ಇ–ಕೆ.ವೈ.ಸಿ ಸಂಗ್ರಹಿಸಿಕೊಳ್ಳಲು ಪಡಿತರ ಚೀಟಿದಾರರಿಗೆ ಅಂತಿಮ ಗಡುವು ನೀಡಿದ್ದು, ತಪ್ಪದೇ ಇ.ಕೆ.ವೈ.ಸಿ ಮಾಡಿಸಬೇಕು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಇಂದು ಜಿಲ್ಲಾ ವಕೀಲರ ಸಂಘದಿಂದ ಪುಸ್ತಕ ಬಿಡುಗಡೆ ಸಮಾರಂಭ

» ದಾವಣಗೆರೆ

ಜಿಲ್ಲಾ ವಕೀಲರ ಸಂಘ, ದಾವಣಗೆರೆ ವತಿಯಿಂದ ವಕೀಲ ಕೆ.ದಾದಾಪೀರ್ ಬರೆದಿರುವ ಲಾಯರ್ ರೆಡಿ ರೆಕನರ್ ಪುಸ್ತಕ ಬಿಡುಗಡೆ ಸಮಾರಂಭ ಆಗಸ್ಟ್ 29ರಂದು ವಕೀಲರ ಸಾಂಸ್ಕೃತಿಕ ಸಮುದಾಯ ಭವನದಲ್ಲಿ ಬೆಳಿಗ್ಗೆ 10.30ಕ್ಕೆ ನಡೆಯಲಿದೆ.ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಪುಸ್ತಕ ಬಿಡುಗಡೆ ಮಾಡುವರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್‌ಕುಮಾರ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ, 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರಾದ ಆರ್.ಎನ್.ಪ್ರವೀಣ್‌ಕುಮಾರ್, ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಎಸ್‌ಟಿಎಫ್‌ಸಿಗಳಾದ ಶ್ರೀರಾಮ ನಾರಾಯಣ ಹೆಗಡೆ, ಕೌಟುಂಬಿಕ ನ್ಯಾಯಾಲಯದ ಜಿಲ್ಲಾ ನ್ಯಾಯಾಧೀಶರಾದ ಶಿವಪ್ಪ ಗಂಗಪ್ಪ ಸಲಗರೆ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು, ಸಿಜೆಎಂ ಟಿ.ಎಂ.ನಿವೇದಿತಾ ಆಗಮಿಸಲಿದ್ದಾರೆ ಎಂದು ದಾವಣಗೆರೆ ಜಿಲ್ಲಾ ವಕೀಲರ ಸಂಘ ತಿಳಿಸಿದೆ.

### ಚರ್ಮದ ಉತ್ಪನ್ನಗಳು ರಿಯಾಯತಿ ದರದಲ್ಲಿ


» ಚಿತ್ರದುರ್ಗ

ಜಿಲ್ಲೆಯ ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ವತಿಯಿಂದ ಲಿಡ್ಕರ್ ಲೆದರ್ ಎಂಪೋರಿಯಂ ಮಾರಾಟ ಮಳಿಗೆಯಲ್ಲಿ ಇದೇ ಆಗಸ್ಟ್ 28 ರಿಂದ ಸೆಪ್ಟೆಂಬರ್ 6 ರವರೆಗೆ ಶ್ರೀ ಗೌರಿ ಗಣೇಶ ಹಬ್ಬದ ಪ್ರಯುಕ್ತ ಶೇ.20 ವಿಶೇಷ ರಿಯಾಯಿತಿ ದರದಲ್ಲಿ ಅತ್ಯುತ್ತಮ ಗುಣಮಟ್ಟದ ಅಪ್ಪಟ ಚರ್ಮದ ಬ್ರಾಂಡೆಡ್ ಉತ್ಪನ್ನಗಳನ್ನು ಮಾರಾಟ ಮಾಡಲಾಗುತ್ತದೆ. ಗ್ರಾಹಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9449181136 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಲಿಡ್ಕರ್ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲೆಯೊಳಗೆ ಯಾವುದೇ ತಾಲ್ಲೂಕಿನಲ್ಲಿ ಆಸ್ತಿಗಳ ನೊಂದಣಿಗೆ ಅವಕಾಶ

» ದಾವಣಗೆರೆ

ಆಸ್ತಿಗಳ ನೊಂದಣಿಯನ್ನು ಯಾವ ಸ್ಥಳದಲ್ಲಾದರೂ ನೊಂದಣಿ ಮಾಡಿಸಲು ಅವಕಾಶ ಕಲ್ಪಿಸಿದ್ದು ಸೆಪ್ಟೆಂಬರ್ 2 ರಿಂದ ಜಿಲ್ಲೆಯೊಳಗೆ ಯಾವುದೇ ತಾಲ್ಲೂಕಿನಲ್ಲಿ ನೊಂದಣಿ ಮಾಡಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಪ್ರಸ್ತುತ ಸಾರ್ವಜನಿಕರು ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪನೋಂದಣಿ ಕಚೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲು ಅವಕಾಶವಿದ್ದು,ಆದರಎನಿವೇರ್‌ನೋಂದಣಿಯಲ್ಲಿ ದಸ್ತಾವೇಜನ್ನು ಸ್ಥಿರಾಸ್ತಿ ಇರುವ ಜಿಲ್ಲೆಯ ಯಾವುದಾದರೂ ಉಪನೋಂದಣಿ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದು. ಎನಿವೇರ್ ನೋಂದಣಿವ್ಯವಸ್ಥೆಯುಸಾರ್ವಜನಿಕರಿಗೆಹಲವರು ರೀತಿಯಲ್ಲಿ ಉಪಯುಕ್ತವಾಗಿದ್ದು ದಸ್ತಾವೇಜಿನ ನೋಂದಣಿಯಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ. ನೋಂದಣಿಯಲ್ಲಿ ವಿಳಂಬವನ್ನು ತಡೆಗಟ್ಟುತ್ತದೆ, ಸಾರ್ವಜನಿಕರು ಸಮೀಪದಲ್ಲಿರುವ ಉಪನೋಂದಣಿ ಕಚೇರಿಯಲ್ಲಿ ದಸ್ತಾವೇಜನ್ನು ನೋಂದಾಯಿಸಬಹುದು. ಸ್ಲಾಟ್ ಲಭ್ಯವಿರುವಂತಹ ಕಚೇರಿಯನ್ನು ನೋಂದಣಿಗೆ ಆಯ್ಕೆ ಮಾಡಿಕೊಳ್ಳಬಹುದು, ನೋಂದಣಿ ಪ್ರಕ್ರಿಯೆ ಸುಲಭವಾಗುವುದಲ್ಲದೆ ಸಮಯವು ಸಹ ಉಳಿಯುತ್ತದೆ, ಉಪನೋಂದಣಿ ಕಚೇರಿಗಳಲ್ಲಿ ಜನದಟ್ಟಣೆಕಡಿಮೆಯಾಗುತ್ತದೆ.ಕಚೇರಿ ಸಿಬ್ಬಂದಿಗಳ ಮೇಲೆ ಕೆಲಸದ ಒತ್ತಡ ಕಡಿಮೆಯಾಗುತ್ತದೆ ಹಾಗೂ ಕಚೇರಿಗಳಲ್ಲಿ ನೋಂದಣಿ ಕೆಲಸ ಸಮಾನವಾಗಿ ಹಂಚಿಕೆಯಾಗುತ್ತದೆ. ಸಾರ್ವಜನಿಕರು ಎನಿವೇರ್ ನೋಂದಣಿಯ ಸದುಪಯೋಗಪಡಿಸಿಕೊಂಡು ತಮಗೆ ಹತ್ತಿರದ ಅಥವಾ ನೋಂದಣಿಗೆ ಸ್ಲಾಟ್ ಲಭ್ಯವಿರುವಂತಹ ಕಚೇರಿ ಆಯ್ಕೆ ಮಾಡಿಕೊಂಡು ನೊಂದಣಿ ಮಾಡಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.



ಚಳ್ಳಕೆರೆಯ ತ್ಯಾಗರಾಜ ನಗರದ ಮಂಜುನಾಥ, ಲಕ್ಷ್ಮಿ ದಂಪತಿಯ ಪುತ್ರಿಯನ್ನು ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ರಾಧೆ ವೇಷದಲ್ಲಿ ಕಾಣಿಸಿದರು.

ಸಿದ್ದರಾಮಯ್ಯ ಬಳಿಗೆ ಮಾದಿಗ ಮುಖಂಡರ ನಿಯೋಗ –ಸುಪ್ರೀಂಕೋರ್ಟ್‌ತೀರ್ಪುಜಾರಿಗೆ ಬದ್ಧನೆಂದುಅಭಯ ನೀಡಿದ ಸಿಎಂ

# ಒಳಮೀಸಲು ಜಾರಿಗೊಳಿಸಲು ಒತ್ತಾಯ

» ಚಿತ್ರದುರ್ಗ

ಸುಪ್ರೀಂ ಕೋರ್ಟ್ ತೀರ್ಪಿನ ಅನ್ವಯ ಒಳಮೀಸಲಾತಿ ಜಾರಿಗೆ ತುರ್ತು ಕ್ರಮಕೈಗೊಳ್ಳುವಂತೆ ಕಾಂಗ್ರೆಸ್ ಪಕ್ಷದ ಮಾದಿಗ ಸಮುದಾಯದ ಮುಖಂಡರು ಮತ್ತು ಸಚಿವರಾದ ಕೆ.ಎಚ್.ಮುನಿಯಪ್ಪ, ಆರ್.ಬಿ.ತಿಮ್ಮಾಪೂರ್ ನೇತೃತ್ವದಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನು ಬುಧವಾರ ಭೇಟಿ ಮಾಡಿ ಮನವಿ ಸಲ್ಲಿಸಿದರು.

ಬೆಂಗಳೂರಿನ ಸಿಎಂ ಗೃಹ ಕಚೇರಿಯಲ್ಲಿ ಭೇಟಿ ಮಾಡಿದ ನಿಯೋಗದಲ್ಲಿನ ಮುಖಂಡರು ಮತ್ತು ಸಚಿವರಾದ ಕೆ.ಎಚ್. ಮುನಿಯಪ್ಪ, ಆರ್.ಬಿ.ತಿಮ್ಮಾಪೂರ್, ಮಾಜಿ ಸಚಿವ ಎಚ್.ಆಂಜನೇಯ, ರಾಜ್ಯಸಭೆ ಮಾಜಿ ಸದಸ್ಯ ಡಾ.ಎಲ್. ಹನುಮಂತಯ್ಯ ಮಾತನಾಡಿ, ಒಳಮೀಸಲು ಜಾರಿಗೆ ಇದ್ದ ಅಡೆತಡೆಗೆ ಸುಪ್ರೀಂ ಕೋರ್ಟ್ ತೀರ್ಪು ನಿವಾರಣೆ ಮಾಡಿದೆ. ಅದೆಲ್ಲದಿಕ್ಕಿಂತಲೂ ತಾವೂ ಸದಾ ಶೋಷಿತರ ಪರ ಹೋರಾಟ, ಯೋಜನೆ ರೂಪಿಸುತ್ತಿರುವ ಹರಿಕಾರರು. ತಮ್ಮ ಸಾಮಾಜಿಕ ನ್ಯಾಯ ಬದ್ಧತೆ ಪ್ರಶ್ನಾತೀತ. ಒಳಮೀಸಲು ಜಾರಿಗೊಳಿಸಲು ತಮ್ಮಲ್ಲಿನ ಇಚ್ಛಾಶಕ್ತಿಗೆ ಬಲ ತುಂಬಲು ನಿಯೋಗದ ಮೂಲಕ ಮನವಿ ಸಲ್ಲಿಸುತ್ತಿದ್ದೇವೆ ಎಂದು ಹೇಳಿ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿದರು.ಮನವಿ ಪತ್ರವನ್ನು ಓದಿದ ಮಾಜಿ ಸಚಿವ ಎಚ್.ಆಂಜನೇಯ, ಮಾದಿಗ ಸಮುದಾಯಕ್ಕೆ ನ್ಯಾಯವಾಗಿ ದೊರಕಬೇಕಾಗಿದ್ದ ಮೀಸಲಾತಿ ಪ್ರಮಾಣ ನಿರೀಕ್ಷೆಮಟ್ಟದಲ್ಲಿ ದೊರೆತಿಲ್ಲ. ಈ ಸತ್ಯವನ್ನು ಅರಿತು ಜೊತೆಗೆ ಬಹಳಷ್ಟು ವರದಿಗಳನ್ನು ಮುಂದಿಟ್ಟುಕೊಂಡು ಒಳಮೀಸಲು ಜಾರಿಗೆ ಮಾದಿಗ ಸಮುದಾಯ ಸತತ ಮೂವತ್ತು ವರ್ಷಗಳಿಂದ ಹೋರಾಟ ನಡೆಸಿಕೊಂಡು ಬಂದಿದೆ ಎಂದರು.ನಿರಂತರ ಹೋರಾಟದ ಫಲ ಒಳ ಮೀಸಲಾತಿ ವರ್ಗೀಕರಣಕ್ಕಾಗಿ ಸುಪ್ರೀಂ ಕೋರ್ಟ್ ಅಸ್ತು ಎಂದಿದೆ. ಜೊತೆಗೆ ಒಳ ಮೀಸಲಾತಿ ಕಲ್ಪಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿದೆಯೆಂದು ಐತಿಹಾಸಿಕ ತೀರ್ಪನ್ನು ನೀಡಿದೆ.



ಈಗಾಗಲೇ ತೆಲಂಗಾಣ ಮತ್ತು ಆಂಧ್ರ ಪ್ರದೇಶ ಸರ್ಕಾರಗಳು ಒಳ ಮೀಸಲಾತಿ ವರ್ಗೀಕರಣಕ್ಕೆ ಮುಂದಾಗಿವೆ. ಅದೇ ರೀತಿ ತಾವು ಕೂಡ ಸುಪ್ರೀಂಕೋರ್ಟ್ ತೀರ್ಪನ್ನು ಸ್ವಾಗತಿಸಿದ್ದು, ಶೀಘ್ರ ಜಾರಿಗೊಳಿಸುವ ಮೂಲಕ ಸಮುದಾಯದ ಸಮಗ್ರ ಪ್ರಗತಿಗೆ ಮುಂದಾಗಬೇಕೆಂದು ಕೋರಿದರು.

ಮುಖ್ಯವಾಗಿ ಈಗಾಗಲೇ ಕೆ.ಪಿ.ಎಸ್.ಸಿ ಸೇರಿ ವಿವಿಧ ಇಲಾಖೆಗಳ ಮೂಲಕ ಘೋಷಿತವಾಗಿರುವ ಪರೀಕ್ಷೆಗಳನ್ನು ಒಳಮೀಸಲು ಜಾರಿಗೊಳ್ಳುವವರೆಗೂ ತಡೆ ಹಿಡಿಯಬೇಕು ಹಾಗೂ 384 ಗೆಜೆಟೆಡ್ ಪ್ರೊಬೇಷನರ್ ಹುದ್ದೆಗಳಿಗೆ ಆಗಸ್ಟ್ 27 ರಂದು ನಡೆದಿರುವ ಪೂರ್ವಭಾವಿ ಪರೀಕ್ಷೆಗೆ ಸಂಬಂಧಿಸಿದಂತಹ ಮುಂದೆ ನಡೆಯುವ ಮುಖ್ಯ ಪರೀಕ್ಷೆಯಲ್ಲಿ ಒಳ ಮೀಸಲಾತಿ ಹಂಚಿಕೆ ಪ್ರಕಾರ ನಡೆಸುವ ಹುದ್ದೆಗಳು ಹಂಚಿಕೆಯಾಗುವಂತೆ ಷರತ್ತು ವಿಧಿಸಿ ನೋಟಿಫಿಕೇಷನ್ ಮಾಡಬೇಕು ಎಂದು ಮನವಿ ಮಾಡಿದರು.

ಒಳ ಮೀಸಲಾತಿ ಜಾರಿಗೊಳ್ಳುವವರೆಗೆ ರಾಜ್ಯ ಸರ್ಕಾರದ ಯಾವುದೇ ಇಲಾಖೆಗಳ ಹುದ್ದೆಗಳನ್ನು ತುಂಬುವ ಪ್ರಕ್ರಿಯೆಗಳು ನಡೆಯಬಾರದು ಹಾಗೂ ಸರ್ಕಾರದ ಯೋಜನೆಗಳಲ್ಲಿ ಆರ್ಥಿಕ ಮೀಸಲಾತಿ (SCSP/TSP), ಕೆ.ಐ.ಎ.ಡಿ.ಬಿ ಮತ್ತು ನಗರಾಭಿವೃದ್ಧಿ ಪ್ರಾಧಿಕಾರಗಳ ನಿವೇಶನಗಳನ್ನು ಹಂಚಿಕೆ ಮಾಡುವ ಪ್ರಕ್ರಿಯೆಯೂ ಸ್ಥಗಿತಗೊಳಿಸಬೇಕು.

ಸುಪ್ರೀಂ ಕೋರ್ಟ್ ತೀರ್ಪು ಬಂದ ತಕ್ಷಣ ತೆಲಂಗಾಣ, ಆಂಧ್ರ ಪ್ರದೇಶ, ಪಂಜಾಬ್, ಹರಿಯಾಣ ಮತ್ತಿತರ ರಾಜ್ಯಗಳ ಸರ್ಕಾರವೂ ಒಳ ಮೀಸಲಾತಿ ಜಾರಿಗೆ ಆಗುವವರೆಗೂ ಖಾಲಿಯಿರುವ ಹುದ್ದೆಗಳಿಗೆ ಕರೆದಿರುವ ಪ್ರಕ್ರಿಯೆಗಳಿಗೆ ತಕ್ಷಣ ತಡೆ ಹಿಡಿದಿದ್ದಾರೆ. ಅದೇ ಮಾರ್ಗವನ್ನು ರಾಜ್ಯದಲ್ಲೂ ಅನುಸರಿಸಬೇಕು ಎಂದು ಕೋರಿದರು.ಸರ್ವರಿಗೂ ಸಮ ಪಾಲು– ಸಮ ಬಾಳು, ಸಾಮಾಜಿಕ ನ್ಯಾಯ, ಸಮಾನತೆಗಾಗಿ ಹೋರಾಟ ಮಾಡಿಕೊಂಡು ಬಂದಿರುವ ಅಹಿಂದ ವರ್ಗದ ನೇತಾರ ಆಗಿರುವ ತಾವು ನೊಂದ ಜನರ ಕುರಿತು ಅಂತಃಕರಣ ಹೃದಯ ಹೊಂದಿದ್ದಿರಾ. ಆದ್ದರಿಂದ ಶೋಷಿತರಲ್ಲೇ ಶೋಷಿತರು, ಅಸ್ಪೃಶ್ಯರಲ್ಲೇ ಅಸ್ಪೃಶ್ಯರು ಆದ ಮಾದಿಗ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಲು ಸುಪ್ರೀಂ ಕೋರ್ಟ್ ತೀರ್ಪಿನ ಅನ್ವಯ ಒಳ ಮೀಸಲು ಜಾರಿಗೆಗಾಗಿ ತಕ್ಷಣ ಆದೇಶ ಹೊರಡಿಸಬೇಕೆಂದು ವಿನಯಪೂರ್ವಕವಾಗಿ ವಿನಂತಿಸುತ್ತೇವೆ ಎಂದು ವಿನಂತಿಸಿದರು.ಎಲ್ಲ ಮುಖಂಡರ ಮಾತು ಆಲಿಸಿ, ಮನವಿ ಪತ್ರ ಸ್ವೀಕರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ನೊಂದ, ಅಸ್ಪೃಷ್ಯ ಸಮಾಜದ ನೋವಿನ ಅರಿವು ನನಗಿದೆ. ಒಳಮೀಸಲು ವಿಷಯದಲ್ಲಿ ಸುಪ್ರೀಂಕೋರ್ಟ್ ತೀರ್ಪು ಪ್ರಕಟಿಸಿದಂತೆ ಅದನ್ನು ಸ್ವಾಗತಿಸಿದ್ದೇನೆ. ಅದರರ್ಥ ನಾನು ನೊಂದ ಜನರ ಪರ ಎಂದರ್ಥ ಎನ್ನುವ ಮೂಲಕ ಒಳಮೀಸಲು ಜಾರಿಗೊಳಿಸುವ ಅಭಯ ನೀಡಿದರು.ನಮ್ಮದು ರಾಷ್ಟ್ರೀಯ ಪಕ್ಷ. ಜೊತೆಗೆ ಸಚಿವ ಸಂಪುಟದಲ್ಲಿ ಈ ವಿಷಯ ತೀರ್ಮಾನಗೊಳ್ಳಬೇಕು. ನಾನು ಹಾಗೂ ಪಕ್ಷ ಸದಾ ನೊಂದ ಜನರ ಪರವಾಗಿ ಇರುವುದು ಎಂದು ಹೇಳಿದರು. ಶಾಸಕರಾದ ಮಾಯಕೊಂಡದ ಕೆ.ಎಸ್.ಬಸವಂತಪ್ಪ, ನೆಲಮಂಗಲದ ಶ್ರೀನಿವಾಸ್, ಮಾಜಿ ಸಚಿವ ಎಂ.ಶಿವಣ್ಣ ,, ವಿಧಾನ ಪರಿಷತ್ತು ಸದಸ್ಯರಾದ ಡಾ.ಡಿ. ತಿಮ್ಮಯ್ಯ ನಿಯೋಗದಲ್ಲಿದ್ದರು.

## ಅಂಚೆ ಸೇವೆ ಸದುಪಯೋಗಪಡಿಸಿಕೊಳ್ಳಿ: ಉಷಾ

» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಸಾರ್ವಜನಿಕರಿಗೆ ಉತ್ತಮ, ಪ್ರಾಮಾಣಿಕ ಸೇವೆಯನ್ನು ನೀಡುವ ಮೂಲಕ ಅಂಚೆ ಇಲಾಖೆ ತನ್ನದೇಯಾದ ವಿಶೇಷ ಮೌಲ್ಯವನ್ನು ಕಾಪಾಡಿಕೊಂಡು ಬಂದಿದೆ. ಇತ್ತೀಚೆಗೆ ಗ್ರಾಮೀಣ ಪ್ರದೇಶದ ಜನರ ಅನುಕೂಲಕ್ಕಾಗಿ ಅನೇಕ ಸೇವೆಗಳನ್ನು ಜಾರಿಗೆ ತಂದಿದ್ದು ಅವುಗಳ ಸದುಪಯೋಗವನ್ನು ಹೆಚ್ಚು ಪಡೆಯಬೇಕೆಂದು ಜಿಲ್ಲಾ ಅಂಚೆ ಅಧೀಕ್ಷಕಿ ಕೆ.ಆರ್.ಉಷಾ ತಿಳಿಸಿದರು.

ಅವರು, ಪರಶುರಾಮಪುರ ಹೋಬಳಿಯ ಟಿ.ಎನ್.ಕೋಟೆ ಗ್ರಾಮದ ಅಂಚೆ ಇಲಾಖೆ ಆವರಣದಲ್ಲಿಆಯೋಜಿಸಿದ್ದಅಂಚೆಜನಸಂಪರ್ಕ ಅಭಿಯಾನವನ್ನು ಉದ್ಘಾಟಿಸಿ ಮಾತನಾಡಿದರು. ಅಂಚೆ ಕಚೇರಿ ಗ್ರಾಮೀಣ ಭಾಗದಲ್ಲಿ ಅತ್ಯಂತ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ. ಸಾರ್ವಜನಿಕರು ಅಂಚೆ ಇಲಾಖೆ ಮೇಲೆ ಅಪಾರವಾದ ವಿಶ್ವಾಸ, ಗೌರವವಿಟ್ಟಿದ್ದಾರೆ. ಯಾವುದೇ ಸಂದರ್ಭದಲ್ಲಿ ಯಾವುದೇ ದುರಾಡಳಿತವನ್ನು ಅಂಚೆ ಇಲಾಖೆಯಲ್ಲಿ ಕಾಣಲು ಸಾಧ್ಯವಿಲ್ಲ. ನಿಮ್ಮ ಹಣ ಭದ್ರವಾಗಿ ಇಡುವಲ್ಲಿ ಅಂಚೆ ಇಲಾಖೆ ಯಶಸ್ವಿಯಾಗಿದೆ. ಅಂಚೆ ಇಲಾಖೆಯ ಎಲ್ಲಾ ಸೇವೆಗಳು ಒಂದೇ



ಸೂರಿನಡಿ ಲಭ್ಯವಿದ್ದು ಗ್ರಾಮೀಣ ಜನರು ಇದರ ಸದುಪಯೋಗವನ್ನು ಪೂರ್ಣಪ್ರಮಾಣದಲ್ಲಿ ಪಡೆಯುವಂತೆ ಮನವಿ ಮಾಡಿದರು.

ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಓಬಕ್ಕ ಮಾತನಾಡಿ, ಗ್ರಾಮೀಣ ಭಾಘದಲ್ಲಿ ಅಂಚೆ ಇಲಾಖೆಯ ಸೇವೆ ಜನರಲ್ಲಿ ಹೊಸವಿಶ್ವಾಸವನ್ನು ಹುಟ್ಟುಹಾಕುವಲ್ಲಿ ಯಶಸ್ವಿಯಾಗಿದೆ. ದಕ್ಷತೆ, ಪ್ರಾಮಾಣಿಕತೆಯನ್ನು ನಾವು ಕೇವಲ ಅಂಚೆ ಇಲಾಖೆಯಲ್ಲಿ ಕಾಣಲು ಸಾಧ್ಯ. ಯಾವುದೇ ಗ್ರಾಮೀಣ ಭಾಗದಲ್ಲಿ ಅಂಚೆ ಇಲಾಖೆಯನ್ನು ನಿರ್ವಹಿಸುವ ಅಧಿಕಾರಿ, ಸಿಬ್ಬಂದಿ ವರ್ಗ ಜನರಿಗೆ ಸೇವೆಯನ್ನು ನೀಡುವಲ್ಲಿ ಯಾವುದೇ ಲೋಪವೆಸಗುವುದಿಲ್ಲ. ಇದು ಅಂಚೆ ಇಲಾಖೆಯ ಅವಿರತ ಸೇವೆಯನ್ನು ತೋರಿಸುತ್ತದೆ ಎಂದರು.

ಅಂಚೆ ನಿರೀಕ್ಷಕ ಮಂಜುನಾಥ, ಸಹಾಯಕ ಅಂಚೆ ನಿರೀಕ್ಷಕ ಬಸವರಾಜು, ಪಿ.ಎಂ. ಎಸ್.ಶರೀಫ್, ತಿಪ್ಪೇರುದ್ರಪ್ಪ, ಮೇಲ್ವಿಚಾರಕ ರಾಘವೇಂದ್ರ,ಮೈಲನಹಳ್ಳಿನಾಗರಾಜ, ಬ್ರಾಂಚ್ ಪೋಸ್ಟ್‌ಮಾಸ್ಟರ್ ಸಿದ್ದೇಶ್, ವಿ.ನಂದಿನಿ, ಸರಸ್ವತಿ, ನಾಗರಾಜು, ಚಿಕ್ಕಣ್ಣ, ಮುಖ್ಯ ಶಿಕ್ಷಕ ರಂಗಣ್ಣ ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ಸಹ್ಯಾದ್ರಿ ಶಿಕ್ಷಣ ಸಂಸ್ಥೆಯಲ್ಲಿ ಕೃಷ್ಣ ಜನ್ಮಾಷ್ಟಮಿ ಅಂಗವಾಗಿ ವೇಷಭೂಷಣ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು ಕೃಷ್ಣ, ರಾಧೆ ವೇಷದಲ್ಲಿ ಕಂಡರು. ಶಿಕ್ಷಕರಾದ ಪವಿತ್ರ, ಸುಶೀಲಗೌಡ, ಶಾಹೀದಾಬೇಗಂ, ಸೌಮ್ಯ, ಮಂಗಳ, ಎಚ್.ಮಂಜುನಾಥ ಇದ್ದರು.



ಚಳ್ಳಕೆರೆ ನಗರದ ಯಾದವ ಹಾಸ್ಟಲ್‌ನಲ್ಲಿ ಚಿಗುರು ಈ–ಕಿಡ್ಸ್ ಪ್ರೀ ಸ್ಕೂಲ್ಕ್ ಬುಧವಾರ ಶ್ರೀಕೃಷ್ಣ ಜನ್ಮಾಷ್ಟಮಿ ನಿಮಿತ್ತ ಏರ್ಪಡಿಸಿದ್ದ ಕೃಷ್ಣ, ರಾಧೆಯರ ವೇಷಭೂಷಣ ಸ್ಪರ್ಧೆಯಲ್ಲಿ ಪುಟ್ಟಾಣಿ ಮಕ್ಕಳು ಭಾಗವಹಿಸಿದ್ದರು. ಕಾರ್ಯದರ್ಶಿ ಜೆ.ಸಿ.ಶಶಿಕುಮಾರ್, ಶಿಕ್ಷಕರಾದ ಸ್ಫೂರ್ತಿ, ಪುಷ್ಪಲತಾ, ಬೃಂದಾ ಇದ್ದರು.

## ಶ್ರೀರಾಂಪುರ ಕ್ರೀಡಾಕೂಟ: ತಂಡಗ ಶಾಲೆಗೆ ಸಮಗ್ರ ಪ್ರಶಸ್ತಿ

» ಹೊಸದುರ್ಗ

ಶ್ರೀರಾಂಪುರ ಹೋಬಳಿ ಮಟ್ಟದ ಕ್ರೀಡಾಕೂಟ ಸ್ಪರ್ಧೆಯಲ್ಲಿ ತಂಡಗಳ ಶಾಲಾ ವಿದ್ಯಾರ್ಥಿಗಳು ಸಮಗ್ರ ಪ್ರಶಸ್ತಿ ಪಡೆದುಕೊಂಡಿದ್ದಾರೆ.

ಬಾಲಕರ ವಾಲಿಬಾಲ್ ಪ್ರಥಮ, ಬಾಲಕಿಯರ ಬಾಲ್ ಬ್ಯಾಡ್ಮಿಂಟನ್ ಪ್ರಥಮ, ಬಾಲಕಿಯರ ವಾಲಿಬಾಲ್ ಪ್ರಥಮ, ಅಥೆಟಿಕ್ಸ್ ವಿಭಾಗದಲ್ಲಿ ಎತ್ತರ ಜಿಗಿತ ಟಿ ಎಂ ಮಾರುತಿ ಪ್ರಥಮ, ಡಿಸ್ಕಸ್ ತ್ರೊ ಬಾಲಕಿಯರ ವಿಭಾಗ ಸಂಗೀತ ಎಲ್ ಪ್ರಥಮ, ಜಾವೆಲಿನ್ ನಲ್ಲಿ ಪಿ ಮಾರುತಿ ಪ್ರಥಮ, 5 ಕಿಲೋಮೀಟರ ನಡಿಗೆ ದಿಲೀಪ ದ್ವಿತೀಯ ಸ್ಥಾನ 4*100 ರಿಲೇ ಬಾಲಕಿಯರ ವಿಭಾಗದಲ್ಲಿ ಲೇಖನ ಮತ್ತು ತಂಡ ದ್ವಿತೀಯ, 800ಮೀ ಓಟದಲ್ಲಿ ಗೀತಾ ತೃತೀಯ, ಕವನ 200ಮೀ ತೃತೀಯ ಸ್ಥಾನವನ್ನು ಪಡೆದು ಶಾಲೆಗೆ ಕೀರ್ತಿಯನ್ನು ತಂದಿರುತ್ತಾರೆ. ಮಕ್ಕಳಿಗೆ ಮುಖ್ಯ ಶಿಕ್ಷಕರಾದ ಕೆಂಪರಾಜ್ ದೈಹಿಕ ಶಿಕ್ಷಣ ಶಿಕ್ಷಕರಾದ ದೇವೇಂದ್ರ ಟೀಮ್ ಮ್ಯಾನೇಜರ್ ಗಳಾದ ಮಂಜುಳಾ, ನೇತ್ರಾವತಿ , ಪ್ರವೀಣ್ ಹಾಗೂ ಎಲ್ಲಾ ಶಿಕ್ಷಕರು ಸಿಬ್ಬಂದಿ ವರ್ಗದವರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.



**ಪ್ರಮುಖ ಸುದ್ದಿ**

# ಸಿದ್ದೇಶ್ವರನದುರ್ಗದಲ್ಲಿ ಕಾನೂನು ಸಲಹಾ ಕೇಂದ್ರ ಉದ್ಘಾಟನೆ

» ಪರಶುರಾಂಪುರ

ಗ್ರಾಮೀಣ ಭಾಗದಜನರಿಗೆ ಕಾನೂನು ತಿಳಿವಳಿಕೆ ನೀಡುವಉದ್ದೇಶದಿಂದಗ್ರಾಮ ಪಂಚಾಯಿತಿಯಲ್ಲಿ ಕಾನೂನು ಸಲಹೆ ಹಾಗೂ ಸಹಾಯಕೇಂದ್ರವನ್ನು ಪ್ರಾರಂಭಿಸಲಾಗಿದೆಎಂದುತಾಲೂಕ ನ್ಯಾಯಾಧೀಶ ಶಮೀರ್ ಪಿ ನಂದ್ಯಾಲ್ ತಿಳಿಸಿದರು.

ಸಮೀಪದ ಸಿದ್ದೇಶ್ವರನದುರ್ಗಗ್ರಾಪಂಯಆವರಣದಲ್ಲಿ ಬುಧವಾರತಾಲೂಕ ಕಾನೂನು ಸೇವಾ ಸಮಿತಿ ಹಾಗೂ ವಕೀಲರ ಸಂಘ, ಜಿಲ್ಲಾ, ತಾಲೂಕು ಪಂಚಾಯತ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದಉಚಿತ ಕಾನೂನು ಸಲಹೆ ಮತ್ತು ಸಹಾಯಕೇಂದ್ರಉದ್ಘಾಟನಾಕಾರ್ಯಕ್ರಮದಲ್ಲಿ ಮಾತನಾಡಿದರು. ಪ್ರತಿ ವಾರಕ್ಕೊಮ್ಮೆ ಸಲಹಾ ಕೇಂದ್ರದಲ್ಲಿಒಬ್ಬ ವಕೀಲರನ್ನು ನೇಮಿಸಲಾಗಿದ್ದು, ಜನರು ಕಾನೂನು ಸಲಹೆ ಪಡೆಯುವಂತೆ ಹೇಳಿದರು. ಜಿಪಂ ಮುಖ್ಯಕಾರ್ಯನಿರ್ವಾಹಕಅಧಿಕಾರಿ ಸೋಮಶೇಖರ್‌ಎಸ್‌ಜೆ ಮಾತನಾಡಿ, ಗ್ರಾಪಂ ಗಳು ವ್ಯಾಜ್ಯಜತೆತ್ಯಾಜ್ಯ ಮುಕ್ತ ಗ್ರಾಪಂ ವಾದಾಗಉತ್ತಮ ಸಮಾಜ ನಿರ್ಮಾಣವಾಗಲು ಸಾಧ್ಯ.



ಇದಕ್ಕೆಎಲ್ಲರೂಕೈಜೋಡಿಸುವುದ ರಜತೆ ವಿದ್ಯಾರ್ಥಿಗಳು ಪರಿಸರ ಉಳಿಸಿ ಬೆಳಸಿಕೋಂಡು ಹೋಗೋಣವೆಂಬುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದರು. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ವಿಜಯ ಎಂ ಮಾತನಾಡಿ,ಅನಾನುಕೂಲತೆಗಳಾದಾಗ ಕಾನೂನಿನ ಮೊರೆಹೋಗಿ, ತಮ್ಮಸಮಸ್ಯೆ ಬಗೆಹರಿಸಿಕೊಳ್ಳುವ ಅವಕಾಶ ಇಲ್ಲಿರುವುದರಿಂದ ಸಾರ್ವಜನಿಕರು ಈ ಸಲಹಾ ಕೇಂದ್ರದ ಸದುಪಯೋಗ ಪಡೆಯಬೇಕುಎಂದುಕರೆ ನೀಡಿದರು.

ತಾಲೂಕು ವಕೀಲರ ಸಂಘದಅಧ್ಯಕ್ಷ ನಾಗರಾಜ ಮಾತನಾಡಿ,ಸಣ್ಣ ಪುಟ್ಟ ವ್ಯಾಜ್ಯಗಳಿಗೆ ಕೋರ್ಟಿಗೆ ಬರಬೇಡಿ.ರಾಜಿ ಮನೋಭಾವನೆಯೊಂದಿಗೆಉತ್ತಮ ಭ್ರಾತೃತ್ವ ಬೆಳಸಿಕೋಳ್ಳಿ ಜೊತೆಗೆಉಚಿತ ಕಾನೂನು ಅರಿವಿನ ಜೊತೆಗೆ ನೆರವಿನೊಂದಿಗೆ ಶಾಂತಿಯುತಜೀವನ ನಡೆಸಬೇಕುಎಂದರು.

ವಕೀಲ ಸಿದ್ದರಾಜು ಮಾತನಾಡಿ,ಜನನ ಮತ್ತು ಮರಣ ನೋಂದಣಿಕಾಯ್ದೆ ಬಗ್ಗೆ ಉಪನ್ಯಾಸ ನೀಡಿದರು.ಉಚಿತ ಕಾನೂನು ಸಲಹೆ ಮತ್ತು ನೆರವು ಪಡೆಯುವವರು.

ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದವರುಕಾರ್ಖಾನೆಕಾರ್ಮಿಕರು, ಮಹಿಳೆಯರು,ಮಕ್ಕಳು ವಾರ್ಷಿಕ ಮೂರು ಲಕ್ಷ ರೂಗಳಿಗಿಂತ ಕಡಿಮೆಇರುವಎಲ್ಲ ವರ್ಗದ ಜನರು,ಮಾನಸಿಕ ಅಥವಾ ಬೇರೆಯಾವುದೋ ನ್ಯೂನತೆಯನ್ನ ಹೊಂದಿರುವವರು ,ಗುಂಪು ಗರ್ಷಣೆ, ಗಲಭೆ,ಪ್ರವಾಹ, ಭೂಕಂಪ, ಕೈಗಾರಿಕಾ ಸಂತ್ರಸ್ತರು,ದೈಹಿಕ ವ್ಯಾಪಾರಅಥವಾಜೀತಕ್ಕೆ ಒಳಗಾದವರು, ಶಿಕ್ಷೆಗೆ ಒಳಗಾದ, ವಿಚಾರಣಾಧೀನಸಂಧಿಗಳು,ರಕ್ಷಣಾ ಗೃಹ,ಮನೋರೋಗಿಗಳ ಅಭಿರಕ್ಷಿಯಲ್ಲಿರುವವರು,ಕ್ರಿಮಿನಲ್ ಪ್ರಕರಣ ಗಾಯಾಳು ಸಂತ್ರಸ್ತರಿಗೂಉಚಿತ ಕಾನೂನು ಸಲಹೆ ಮತ್ತು ನೆರವುದೊರೆಯಲಿದೆ.ಈ ವೇಳೆಯಲ್ಲಿ ನ್ಯಾಯಾಧೀಶ ಹೇಮಾ ಎಚ್‌ಆರ್, ಗ್ರಾಪಂಅಧ್ಯಕ್ಷೆ ಪುಟ್ಟೀರಮ್ಮ, ಉಪಾಧ್ಯಕ್ಷೆ ಲಕ್ಷ್ಮೀದೇವಿ, ಇಓ ಶಶಿಧರ,ಎಡಿ ಸಂತೋಷ,ವಕೀಲರ ಸಂಘದ ಪಾಲಯ್ಯ,ರುದ್ರಯ್ಯ, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳ, ಸೇರಿದಂತೆ ವಕೀಲರು, ಪೋಲಿಸ್ ಸಿಬ್ಬಂದಿ ಹಾಗೂ ಗ್ರಾಮಸ್ಥರು,ಸಾರ್ವಜನಿಕರು ಉಪಸ್ಥಿತರಿದ್ದರು

## ಫಾಸ್ಟ್ ನ್ಯೂಸ್

### ಆ.31ರಂದು ಕಾರ್ಯಾಗಾರ

» ಚಿತ್ರದುರ್ಗ

ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯಗಳು, ಕಂದಾಯ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಜಿಲ್ಲಾಡಳಿತ ವತಿಯಿಂದ ಇದೇ ಆಗಸ್ಟ್ 31ರಂದು ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ "ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮ ಮತ್ತುಸಂಬಂಧಿಸಿದಕಾಯ್ದೆಗಳಬಗ್ಗೆ"ಒಂದುದಿನದ ಕಾರ್ಯಾಗಾರ ಆಯೋಜಿಸಲಾಗಿದೆ. ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯ ಅಧ್ಯಕ್ಷ ನ್ಯಾಯಮೂರ್ತಿ ಬಿ.ಎ.ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ವಿಶೇಷ ಆಹ್ವಾನಿತರಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ ರೋಣ್ ವಾಸುದೇವ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಪೊಲೀಸ್ ಅಧೀಕ್ಷಕ ರಂಜೀತ್ ಕುಮಾರ್ ಬಂಡಾರು ಭಾಗವಹಿಸುವರು. ಪ್ರಥಮ ಅಧಿವೇಶನ ಬೆಳಿಗ್ಗೆ 10.30 ರಿಂದ 11.30 ರವರೆಗೆ ನಡೆಯಲಿದ್ದು, "ಕರ್ನಾಟಕ ಭೂ ಕಬಳಿಕೆ ನಿಷೇಧ ಅಧಿನಿಯಮ 2011 ಮತ್ತು ತಿದ್ದುಪಡಿ ಕಾಯ್ದೆ" ಮೊದಲನೇ ಭಾಗದ ಉಪನ್ಯಾಸ ವಿಷಯದ ಕುರಿತು ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯ ಅಧ್ಯಕ್ಷರಾದ ನ್ಯಾಯಮೂರ್ತಿ ಬಿ.ಎ.ಪಾಟೀಲ್ ಉಪನ್ಯಾಸ ನೀಡುವರು. "ಮೋಜಿಣಿ ಮತ್ತು ನಿಯಮಗಳು" ಎರಡನೇ ಭಾಗದ ಉಪನ್ಯಾಸದ ಕುರಿತು ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಅಪರ ನಿರ್ದೇಶಕ ಕೆ.ಜಯಪ್ರಕಾಶ್ ಉಪನ್ಯಾಸ ನೀಡುವರು. ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದ ಕಂದಾಯ ಸದಸ್ಯ ಎಸ್.ಪಾಲಯ್ಯ ಅಧ್ಯಕ್ಷತೆ ವಹಿಸುವರು. ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಉಪಸ್ಥಿತಿ ವಹಿಸುವರು. ದ್ವಿತೀಯ ಅಧಿವೇಶನ ಬೆಳಿಗ್ಗೆ 11.50 ರಿಂದ ಮಧ್ಯಾಹ್ನ 1 ರವರೆಗೆ ನಡೆಯಲಿದ್ದು, "ಕರ್ನಾಟಕ ಭೂ ಕಂದಾಯ ಅಧಿನಿಯಮ ಕಲಂ 192(ಎ) ಮೊದಲನೇ ಭಾಗದ ಉಪನ್ಯಾಸ ವಿಷಯದ ಕುರಿತು ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದ ಕಂದಾಯ ಸದಸ್ಯ ಎಸ್.ಪಾಲಯ್ಯ ಉಪನ್ಯಾಸ ನೀಡುವರು. "ಮುನಿಸಿಪಲ್ ಕಾರ್ಪೋರೇಷನ್ ಮತ್ತು ಪಂಚಾಯಿತಿ ಆಸ್ತಿಗಳ ಒತ್ತುವರಿ ಮತ್ತು ತೆರವುಗೊಳಿಸಲು ಇರುವ ಕಾನೂನು ಪ್ರಕ್ರಿಯೆಗಳು" ಎರಡನೇ ಭಾಗದ ಉಪನ್ಯಾಸ ವಿಷಯದ ಕುರಿತು ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್ ಉಪನ್ಯಾಸ ನೀಡುವರು. "ಕೆರೆ ಒತ್ತುವರಿ ಮತ್ತು ತೆರವುಗೊಳಿಸಲು ಇರುವ ಕಾನೂನು ಪ್ರಕ್ರಿಯೆ" ಮೂರನೇ ಭಾಗದ ಉಪನ್ಯಾಸ ಕುರಿತು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉಪನ್ಯಾಸ ನೀಡುವರು. ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯ ಕಂದಾಯ ಸದಸ್ಯ ಕೆ.ಹೆಚ್.ಅಶ್ವತ್ಥನಾರಾಯಣ ಗೌಡ ಅಧ್ಯಕ್ಷತೆ ವಹಿಸುವರು. ಪೌರಾಯುಕ್ತೆ ಎಂ.ರೇಣುಕಾ ಉಪಸ್ಥಿತಿವಹಿಸುವರು.

ತೃತೀಯ ಅಧಿವೇಶನ ಮಧ್ಯಾಹ್ನ 2 ರಿಂದ 3.15 ರವರೆಗೆ ನಡೆಯಲಿದ್ದು, "ಅರಣ್ಯ ಇಲಾಖೆಯ ಆಸ್ತಿಗಳ ಒತ್ತುವರಿ ಮತ್ತು ತೆರವುಗೊಳಿಸಲು ಇರುವ ಕಾನೂನು ಪ್ರಕ್ರಿಯೆ" ಮೊದಲನೇ ಭಾಗದ ಉಪನ್ಯಾಸ ವಿಷಯದ ಕುರಿತು ನಿವೃತ್ತ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಎ.ಎಂ.ಅಣ್ಣಯ್ಯ ಉಪನ್ಯಾಸ ನೀಡುವರು. "ಮುಜರಾಯಿ ಇಲಾಖೆ ಮತ್ತು ವಕ್ಫ್ ಆಸ್ತಿಗಳ ಒತ್ತುವರಿ ಮತ್ತು ತೆರವುಗೊಳಿಸಲು ಇರುವ ಕಾನೂನು ಪ್ರಕ್ರಿಯೆಗಳು" ಎರಡನೇ ಭಾಗದ ಉಪನ್ಯಾಸದ ವಿಷಯ ಕುರಿತು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯ ವಿಲೇಖನಾಧಿಕಾರಿ ಹೆಚ್.ಕೆ.ನವೀನ್ ಉಪನ್ಯಾಸ ನೀಡುವರು. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಟಿ.ರಾಜಣ್ಣ ಅಧ್ಯಕ್ಷತೆ ವಹಿಸುವರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಉಪಸ್ಥಿತಿವಹಿಸುವರು. ಮಧ್ಯಾಹ್ನ 3.15 ರಿಂದ ಸಂಜೆ 4.15 ರವರೆಗೆ ಚರ್ಚೆ ಹಾಗೂ ವಿಮರ್ಶೆ ನಡೆಯಲಿದ್ದು, ಸಂಜೆ 4.30 ರಿಂದ 5 ರವರೆಗೆ ಸಮಾರೋಪ ಸಮಾರಂಭ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

### ಆಗಸ್ಟ್ 31 ರಂದು ನೇರ ನೇಮಕಾತಿ ಸಂದರ್ಶನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಇದೇ ಆಗಸ್ಟ್ 31ರಂದು ಬೆಳಿಗ್ಗೆ 10 ರಿಂದ 2 ರವರೆಗೆ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಸಂದರ್ಶನದಲ್ಲಿ ವಿವಿಧ ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೊಮಾ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ ಅಥವಾ ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು ಅಗತ್ಯ ದಾಖಲೆಗಳಾದ 3 ಬಯೋಡಾಟಾ ಪ್ರತಿಗಳು, ವಿದ್ಯಾರ್ಹತೆಯ ಜೆರಾಕ್ಸ್ ಪ್ರತಿಗಳು ಹಾಗೂ ಆಧಾರ್ ನಂಬರ್‌ನೊಂದಿಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಹಳೇ ವೈಶಾಲಿ ಗೇಟ್ ಹತ್ತಿರ, ಸ್ಟೇಡಿಯಂ ತಿರುವು, ಉದ್ಯೋಗ ವಿನಿಮಯ ಕೇಂದ್ರ ಕಚೇರಿ, ಚಿತ್ರದುರ್ಗ ದೂರವಾಣಿ ಸಂಖ್ಯೆ 7022459064, 9945587060, 8105619020 ಗೆ ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

# ಶಾಂತಿಯಿಂದ ಗೌರಿ ಗಣೇಶ, ಈದ್ ಮಿಲಾದ್ ಹಬ್ಬ ಆಚರಿಸಿ: ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ

» ದಾವಣಗೆರೆ



ಶಾಂತಿಯುತ, ಸೌಹಾರ್ದ ಹಾಗೂ ಸಂಭ್ರಮದಿಂದ ಗೌರಿ ಗಣೇಶ ಮತ್ತು ಈದ್ ಮಿಲಾದ್ ಹಬ್ಬ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಜನರಲ್ಲಿ ಮನವಿ ಮಾಡಿದರು.

ಅವರು ಜಿಲ್ಲಾಡಳಿತ ಹಾಗೂ ಜಿಲ್ಲಾ ಪೊಲೀಸ್ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಬುಧುವಾರ ತುಂಗಭದ್ರಾ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ನಾಗರೀಕ ಸೌಹಾರ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗಣೇಶ ಚತುರ್ಥಿಯನ್ನು ಪ್ರತಿ ವರ್ಷದ ಆಚರಣೆಯಂತೆ ಹಾಗೂ ಸಾಂಪ್ರದಾಯಿಕವಾಗಿ ಈ ವರ್ಷವೂ ಆಚರಿಸಬೇಕು.ಸಾರ್ವಜನಿಕವಾಗಿಗಣೇಶನ ಮೂರ್ತಿ ಪ್ರತಿಷ್ಠಾಪಿಸುವ ಪ್ರತಿಯೊಬ್ಬರು ಸಂಬಂಧ ಪಟ್ಟ ಇಲಾಖೆಯಿಂದ ಅನುಮತಿ ಪಡೆದುಕೊಂಡು ಪರಿಸರಕ್ಕೆ ಮಾರಕವಾಗಿರುವ ಪಿಓಪಿ ಗಣೇಶ ಮೂರ್ತಿಗಳ ಬಳಕೆ ಮಾಡದೇ, ಮಣ್ಣಿನ ಮೂರ್ತಿಗಳನ್ನು ಪ್ರತಿಷ್ಠಾಪಿಸಬೇಕು ಎಂದು ತಿಳಿಸಿದರು.

ಸರ್ಕಾರ ಈಗಾಗಲೇ ಹಬ್ಬದ ಆಚರಣೆಗೆ ನಿರ್ದೇಶನಗಳನ್ನು ನೀಡಿದ್ದು, ಗಜಾನನ ಉತ್ಸವ ಸಮಿತಿಯವರು ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಸಾರ್ವಜನಿಕರಿಗೆ ತೊಂದರೆ ಆಗದಂತೆ ಪೆಂಡಾಲ್ ನಿರ್ಮಿಸಬೇಕು, ಪೆಂಡಾಲಗಳಲ್ಲಿ ಅವಘಡ ಸಂಭವಿಸದಂತೆ ಎಚ್ಚರವಹಿಸಬೇಕು, ವಾಹನಗಳ ಸಂಚಾರಕ್ಕೆ ತೊಂದರೆ ಉಂಟಾಗಬಾರದು. ಮೂರ್ತಿ ಪ್ರತಿಷ್ಠಾಪನೆಗೆ ಧ್ವನಿವರ್ಧಕಗಳ ಬಳಕೆಗೆ ಅಧಿಕೃತವಾಗಿ ಪರವಾನಗಿ ಪಡೆಯಬೇಕು. ಹಸಿರು ಪಟಾಕಿ ಬಳಸಿ. ಆಸ್ಪತ್ರೆ, ಶಾಲಾ, ಕಾಲೇಜು ಅಕ್ಕಪಕ್ಕದಲ್ಲಿ ಪಟಾಕಿ ಸಿಡಿಸುವಂತಿಲ್ಲ. ಮತ್ತು ಸುರಕ್ಷತೆ ದೃಷ್ಟಿಯಿಂದ ಪಟ್ಟಣದಾದ್ಯಂತ್ಯ ಸಿಸಿ ಕ್ಯಾಮೆರಾ ಅಳವಡಿಸಲಾಗುವುದು. ಅಹಿತಕರ ಘಟನೆಗಳು ಜರುಗದಂತೆ ಎಚ್ಚರವಹಿಸಲಾಗುವುದು. ಗಣೇಶ ವಿಸರ್ಜನೆಗೆ ನಿಗಧಿ ಮಾಡುವ ರಸ್ತೆಯನ್ನು ಬದಲಿಸಬಾರದು. ನಿಗದಿತ ಸಮಯದಲ್ಲಿಯೇ ಗಣೇಶ ಮೂರ್ತಿ ವಿಸರ್ಜನೆ ಮಾಡಬೇಕು ಎಂದರು.

ಯಾವುದೇ ರೀತಿಯಾಗಿ ದಾರಿ ಮಧ್ಯದಲ್ಲಿ ಗಣೇಶನ ಮೂರ್ತಿಯನ್ನು ಪ್ರತಿಷ್ಠಾಪಿಸಿ ಜನರಿಗೆ ಓಡಾಡಲು ತೊಂದರೆಯಾಗುವಂತೆ ಮಾಡಬಾರದು ಪ್ರತಿಯೊಬ್ಬರು ಯಾವುದೇ ರೀತಿಯಾಗಿ ಅಹಿತಕರ ಘಟನೆಗಳು ಸಂಭವಿಸದಂತೆ ಗಣೇಶನ ಚತುರ್ಥಿ ಆಚರಣೆ ಮಾಡಿ ಎಂದು ತಿಳಿಸಿದರು.

ಸಮಾಜದ ಮುಖಂಡರು ಹಾಗೂ ಹಿರಿಯರು ಯುವಕರಿಗೆ ತಿಳಿವಳಿಕೆಯನ್ನು ನೀಡಿ ಈದ್ ಮಿಲಾದ್ ಹಾಗೂ ಗೌರಿ ಗಣೇಶ ಹಬ್ಬದ ಸಂದರ್ಭದಲ್ಲಿ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ವಾಟ್ಸಪ್ ಮೂಲಕ ಬರುವ ಅನಗತ್ಯ ವಿಷಯಗಳನ್ನು ನಂಬಬಾರದು, ಒಂದು ವೇಳೆ ಅನಗತ್ಯ ಸಂದೇಶಗಳನ್ನು ಫಾರ್ವರ್ಡ್ ಮಾಡುವವರ ಬಗ್ಗೆ ತಿಳಿದುಬಂದರೆ ಅಂಥವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಸಮಾಜ, ಕಾನೂನು, ದೇಶ , ಹಾಗೂ ಸಂವಿಧಾನ ಬಿಟ್ಟು ನಾವ್ಯಾರೂ ದೊಡ್ಡವರಲ್ಲ, ಆದ್ದರಿಂದ ಸಮಾಜದಲ್ಲಿ ಶಾಂತಿ ನೆಲೆಸಲು ಎಲ್ಲ ವರ್ಗದ ಜನರು ವ್ಯವಸ್ಥೆಗೆ ಸಹಕರಿಸಿ ಪರಸ್ಪರ ಗೌರವ ಕೊಟ್ಟು ತಾವೆಲ್ಲರೂ ಶಾಂತಯುತವಾಗಿ ಹಬ್ಬಗಳನ್ನು ಆಚರಣೆ ಮಾಡಬೇಕೆಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಮಾತನಾಡಿ ಗಣೇಶ ಉತ್ಸವಗಳು ನಮ್ಮ ಸಂಸ್ಕೃತಿ, ಸಂಪ್ರದಾಯಗಳನ್ನು ಬಿಂಬಿಸುವ ಉತ್ಸವಗಳಾಗಬೇಕು, ವಿನಾಕಾರಣ ಗೊಂದಲದ ವಾತಾವರಣ ಸೃಷ್ಟಿಯಾಗಬಾರದು. ಪೊಲೀಸ್ ಇಲಾಖೆಯ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು, ಗಣೇಶ ಪ್ರತಿಷ್ಠಾಪಿಸಿರುವ ಕಡೆಗಳಲ್ಲಿ ಸಿಸಿ ಕ್ಯಾಮರಾ ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕು, ಅದು ನಿಮಗೂ, ನಮಗೂ ಹೆಚ್ಚು ಅನುಕೂಲ, ಯಾವುದೇ ರೀತಿ ಅಹಿತಕರ ಘಟನೆಗಳು ನಡೆದಯಂತೆ ತಡೆಯಬಹುದಾಗಿದೆ ಎಂದು ಹೇಳಿದರು.

ಸಾರ್ವಜನಿಕವಾಗಿ ವಿವಿಧ ಸಂಘ ಸಂಸ್ಥೆಗಳು ಗಣೇಶ ಪ್ರತಿಷ್ಠಾಪಿಸುವ ಮುನ್ನ ಪಾಲಿಸಬೇಕಾದ ನಿಯಮ ಹಾಗೂ ನಿಬಂಧನಗಳನ್ನು ಪಾಲಿಸಬೇಕು, ಮುಖ್ಯವಾಗಿ ಗಣೇಶ ಪ್ರತಿಷ್ಠಾಪಿಸುವ ಸ್ಥಳದ ಮಾಹಿತಿ ಹಾಗೂ ಸ್ಥಳದ ಮಾಲೀಕರಿಂದ, ಪೊಲೀಸ್ ಇಲಾಖೆಯ ಅನುಮತಿ ಕಡ್ಡಾಯವಾಗಿ ಪಡೆದಿರಬೇಕು.

ಗಣೇಶ ಹಬ್ಬವನ್ನು ಶ್ರದ್ಧಾಭಕ್ತಿ, ಶಾಂತಿ ಮತ್ತು ಸೌಹಾರ್ದತೆಯ ಸಂಕೇತವಾಗಿ ಆಚರಿಸಬೇಕು, ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಬೇಕು.ಹಬ್ಬಗಳಆಚರಣೆಯಲ್ಲಿ ದುಂದು ವೆಚ್ಚಗಳಿಗೆ ಅವಕಾಶ ನೀಡದೇ ಧಾರ್ಮಿಕತೆ ಸಾರುವಂತಿರಬೇಕು. ಭಾವೈಕ್ಯತೆ ಬಿತ್ತುವ ಮೂಲಕ ಇತರರಿಗೆ ಮಾದರಿಯಾಗುವ ರೀತಿಯಲ್ಲಿ ಆಚರಣೆ ಮಾಡಬೇಕು. ಇಂತಹ ಅವಕಾಶಗಳ ಬಳಕೆ ಮಾಡಿಕೊಂಡು ಶಾಂತಿ ಕದಡಲು ಪ್ರಯತ್ನಿಸುವ ಕಿಡಿಗೇಡಿಗಳ ಮೇಲೆ ಇಲಾಖೆ ಹೆಚ್ಚಿನ ನಿಗಾ ವಹಿಸುತ್ತದೆ, ಇಲಾಖಾ ಸಿಬ್ಬಂದಿಯೊಂದಿಗೆ ಸಾರ್ವಜನಿಕರು ಸಹಕರಿಸಬೇಕು ಎಂದರು.

ಗಣೇಶ ವಿಸರ್ಜನೆ ವೇಳೆ ಕರ್ಕಶವಾದ ಸದ್ದು ಮಾಡುವುದು ನಿಷೇಧಿಸಲಾಗಿದೆ, ಹಿರಿಯರು, ಆನಾರೋಗ್ಯದಿಂದ ಬಳಲುತ್ತಿರುವ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಮುನ್ನೆಚ್ಚರಿಕಾ ಕ್ರಮವನ್ನು ತೆಗೆದುಕೊಳ್ಳಬೇಕೆಂದರು.

ಸಮಾಜದ ಮುಖಂಡರು ಹಾಗೂ ಹಿರಿಯರು ಯುವಕರಿಗೆ ತಿಳಿವಳಿಕೆಯನ್ನು ನೀಡಿ ಈದ್-ಮಿಲಾದ್ ಹಬ್ಬದ ಸಂದರ್ಭದಲ್ಲಿ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಮುಸ್ಲಿಂ ಭಾಂದವರು ಈದ್ ಮಿಲಾದ್ ಹಬ್ಬವನ್ನು ಶಾಂತಿ ಸೌಹಾರ್ದತೆಯಿಂದ ಆಚರಿಸಬೇಕು ಎಂದು ತಿಳಿಸಿದರು.

ಮಹಾನಗರ ಪಾಲಿಕೆಯ ಆಯುಕ್ತರಾದ ರೇಣುಕಾ ಮಾತನಾಡಿ ಮನೆಗಳಲ್ಲಿನ ಚಿಕ್ಕ ಗಣೇಶ ಮೂರ್ತಿಗಳನ್ನು ವಿಸರ್ಜನೆ ಮಾಡಲು ಪ್ರಮುಖ ಸರ್ಕಲ್‌ಗಳಲ್ಲಿ 30 ಮೊಬೈಲ್ ಟ್ಯಾಂಕರ್‌ಗಳನ್ನು ಅಳವಡಿಸಲಾಗಿರುತ್ತದೆ. ವಿಸರ್ಜನೆ ಮಾಡುವ ವೇಳೆ ಒಂದು ಕಡೆ ಮೂರ್ತಿ ಕೊಡುವುದು, ಇನ್ನೊಂದು ಕಡೆ ಹೂವು, ಪೇಟ ಇತ್ಯಾದಿಗಳನ್ನು ಕೊಡಬೇಕು. ಹಾಗೂ ದೊಡ್ಡ ಗಣೇಶ ಮೂರ್ತಿಗಳನ್ನು ವಿಸರ್ಜನೆ ಮಾಡಲು ಶಿರಮಗೊಂಡನಹಳ್ಳಿಯಲ್ಲಿ ಟ್ಯಾಂಕರ್‌ಗಳನ್ನು ಅಳವಡಿಸಲಾಗಿದೆ. ಮತ್ತು ಪಾರ್ಕಿಂಗ್ ಕುಡಿಯುವ ನೀರು, ಲೈಟ್, ಸಿ.ಸಿ ಕ್ಯಾಮೆರಾಗಳ ವ್ಯವಸ್ಥೆ ಮಾಡಲಾಗಿರುತ್ತದೆ ಎಂದು ತಿಳಿಸಿದರು.

ಪಾಲಿಕೆಯಲ್ಲಿ ಮೂವರು ಅಧಿಕಾರಿಗಳನ್ನು ನೇಮಿಸಿ, ಗಣೇಶ ಮೂರ್ತಿ ಪ್ರತಿಷ್ಟಾಪಿಸಲು ಬೇಕಾದ ಎನ್.ಓ.ಸಿ ಕೊಡುವ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಉಪ ವಿಭಾಗಾಧಿಕಾರಿ ಸಂತೋಷ ಪಾಟೀಲ್, ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ್ ಎಂ ಸಂತೋಷ್, ಮಂಜುನಾಥ್ ಹಾಗೂ ಇನ್ನಿತರೆ ಪೊಲೀಸ್ ಅಧಿಕಾರಿಗಳು, ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಶಿಕ್ಷಣ ನೀಡಿ: ಬಾಲ್ಯ ವಿವಾಹ ತಡೆಯಿರಿ; ಸಿಡಿಪಿಓ

» ಪರಶುರಾಂಪುರ



ಬಾಲ್ಯ ವಿವಾಹವು ಅಭಿವೃದ್ಧಿಗೆ ಮಾರಕವಾಗಿರುವ ಸಮಸ್ಯೆಯಾಗಿದೆ.ಬಾಲ್ಯ ವಿವಾಹವನ್ನುತಡೆಗಟ್ಟುವುದು ನಮ್ಮೆಲ್ಲರಕರ್ತವ್ಯ.ಬಾಲ್ಯ ವಿವಾಹ ಕಾನೂನಿನ ಪ್ರಕಾರ ಶಿಕ್ಷಾರ್ಹ ಅಪರಾಧವಾಗಿದೆಎಂದು ಸಿಡಿಪಿಓ ಹರಿಪ್ರಸಾದ್ ತಿಳಿಸಿದರು.

ಗ್ರಾಮದ ವೇದಾವತಿಆಂಗ್ಲ ಮಾಧ್ಯಮ ಶಾಲೆ ಹಾಗೂಸಮುದಾಯಆರೋಗ್ಯಕೇಂದ್ರಸೇರಿದಂತೆ ವಿವಿಧೆಡೆ ಬುಧವಾರಆರೋಗ್ಯ ,ಶಿಕ್ಷಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಭಾಗಿತ್ವದಲ್ಲಿ ಆಯೋಜಿಸಿದ್ದ ಬಾಲ್ಯ ವಿವಾಹ ನಿಷೇಧಕಾಯ್ದೆಕುರಿತಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆ-2006ರ ಪ್ರಕಾರ 18ವರ್ಷದೊಳಗಿನ ಯಾವುದೇ ಹೆಣ್ಣು ಮಕ್ಕಳಿಗೆ ಹಾಗೂ 21 ವರ್ಷದೊಳಗಿನ ಗಂಡು ಮಕ್ಕಳಿಗೆ ಮದುವೆಯಾದಲ್ಲಿಅದನ್ನು ಬಾಲ್ಯ ವಿವಾಹ ಎಂದು ಪರಿಗಣಿಸಲಾಗಿದೆ. ಕಾಯ್ದೆಯ ಪ್ರಕಾರ ಬಾಲ್ಯ ವಿವಾಹ ಆದಲ್ಲಿ ಹುಡುಗ, ಹುಡುಗಿಯತಂದೆತಾಯಿಅಲ್ಲದೇ, ಸಂಬಂಧಟ್ಟಎಲ್ಲರ ವಿರುದ್ಧತಪ್ಪಿತಸ್ಥರಿಗ 'ಕಾರಾಗೃಹವಾಸ ಮತ್ತುದಂಡಅಥವಾಎರಡನ್ನು ವಿಧಿಸಬಹುದಾಗಿದೆಎಂದರು.

ವಧು,ವರದನವಯಸ್ಸುಖಾತರಿಪಡಿಸಿಕೊಂಡೇ ಮದುವೆ ಲಗ್ನ ಪತ್ರಿಕೆ ಮುದ್ರಿಸಬೇಕು.ಈ ಅನಿಷ್ಠ ಪದ್ಧತಿತೊಲಗಿಸಲುಎಲ್ಲ ಸರಕಾರಿ ಹಾಗೂ ಸರಕಾರೇತರ ಶಾಲೆಗಳಲ್ಲಿ ರಾಷ್ಟ್ರಗೀತೆಯ ನಂತರ ಬಾಲ್ಯ ವಿವಾಹದದುಷ್ಪರಿಣಾಮ ಮತ್ತು ಶಿಕ್ಷೆಯ ಬಗ್ಗೆ ಮಾಹಿತಿ ನೀಡುವುದರಜತೆಗೆ ಮಕ್ಕಳಿಗೆ ಬಾಲ್ಯ ವಿವಾಹ ಮಾಡುವುದಿಲ್ಲವೆಂದು ಪ್ರಮಾಣ ವಚನ ಬೋಧನೆ ಮಾಡಿಸಬೇಕುಎಂದಿದ್ದಾರೆ.

ಜಿಲ್ಲೆಯಎಲ್ಲೆ ಆಗಲಿ ಬಾಲ್ಯ ವಿವಾಹ ನಡೆಯುತ್ತಿದ್ದರೆಕೂಡಲೇಮಕ್ಕಳಸಹಾಯವಾಣಿ-1098, ಪೊಲೀಸ್ ಸಹಾಯವಾಣಿ 112, ಜಿಲ್ಲಾ ಮಕ್ಕಳ ರಕ್ಷಣಾಘಟಕದದೂರವಾಣಿ ಸಂಖ್ಯೆ 08482-234050 ಹಾಗೂ ಮಕ್ಕಳ ಕಲ್ಯಾಣ ಸಮಿತಿಯದೂರವಾಣಿ ಸಂಖ್ಯೆ 08482-235714 ಕ್ಕೆ ಕರೆ ಮಾಡಬೇಕು. ಈ ಮೂಲಕ ಬಾಲ್ಯ ವಿವಾಹ ನಿಷೇಧಿಸಲುಎಲ್ಲರೂ ಸಹಕರಿಸಬೇಕುಎಂದರು.ಈ ಸಂಬಂಧಗ್ರಾಮ ಮಟ್ಟದಲ್ಲಿಜನರಿಗೆ ಹೆಚ್ಚಿನ ಪ್ರಚಾರಜತೆಅರಿವಿನ ಮಾಹಿತಿಯನ್ನು ಬಾಲ್ಯ ವಿವಾಹದಿಂದಾಗುವ 'ದುಷ್ಪರಿಣಾಮಜೊತೆಗೆ ಶಿಕ್ಷೆ ಬಗ್ಗೆ ತಿಳಿಸಿ.ಬಾಲ್ಯ ವಿವಾಹ ಮುಕ್ತ ಗ್ರಾಮಗಳನ್ನಾಗಿಸಲು ಎಲ್ಲರೊಂದಿಗೆಆರೋಗ್ಯಇಲಾಖೆಯ ಆಶಾ, ಅಂಗನವಾಡಿ ಸೇರಿದಂತೆ ಪ್ರತಿಯೊಬ್ಬರು ಕೈ ಜೋಡಿಸೋಣಎಂದುಡಾ.ಕುಬೇರ್ ತಿಳಿಸಿದರು.

ಆರೋಗ್ಯ ಇಲಾಖೆ ಸಿಬ್ಬಂದಿ, ಶಿಕ್ಷಕರು ,ವಿದ್ಯಾರ್ಥಿಗಳು,ಆಶಾ ಕಾರ್ಯಕರ್ತೆಯರು, ಸಿಬ್ಬಂದಿ ಇನ್ನಿತರರು ಉಪಸ್ಥಿತರಿದ್ದರು.

### ಶ್ರೀಕೃಷ್ಣನ ಬೋಧನೆಗಳು ನಮ್ಮ ಜೀವನಕ್ಕೆ ಮಾರ್ಗದರ್ಶನ: ಶರ್ಮಾ



» ದಾವಣಗೆರೆ

ಶ್ರೀಕೃಷ್ಣ ಪರಮಾತ್ಮನ ಬೋಧನೆಗಳು ನಮ್ಮ ಜೀವನಕ್ಕೆ ಹೊಸ ದಾರಿ ತೋರಿ ಬದುಕಲು ಮಾರ್ಗದರ್ಶನ ನೀಡುತ್ತವೆ. ಭಗವದ್ಗೀತೆ ಉಪದೇಶಗಳನ್ನು ಮಕ್ಕಳಿಗೆ ತಿಳಿಸಬೇಕು ಎಂದು ಶಿಕ್ಷಕರಾದ ಶರ್ಮಾ ಅವರು ತಿಳಿಸಿದರು.ನಗರದ ಪ್ರತಿಷ್ಠಿತ ವಿದ್ಯಾಸಂಸ್ಥೆಗಳಲ್ಲೊಂದಾದ ಶ್ರೀಸೋಮೇಶ್ವರ ವಿದ್ಯಾಲಯದಲ್ಲಿ ನಡೆದ ಶ್ರೀಕೃಷ್ಣ ಜನ್ಮಾಷ್ಟಮಿಯಲ್ಲಿ ಅತಿಥಿಯಾಗಿ ಆಗಮಿಸಿ ಈ ವಿಷಯ ತಿಳಿಸಿದರು. ಭೂ ಮಂಡಲದಲ್ಲಿ ಧರ್ಮ ರಕ್ಷಣೆಗಾಗಿ ಶ್ರೀಕೃಷ್ಣ ಬರುತ್ತಾನೆ, ಆಡಂಬರದ ಜೀವನದಲ್ಲಿ ಕೃಷ್ಣ ಸ್ನೇಹಕ್ಕೆ ಪ್ರಾಧಾನ್ಯತೆ ನೀಡಿ ಒಬ್ಬ ಗುರುವಾಗಿ, ಮಾರ್ಗದರ್ಶಕನಾಗಿ ಜಗತ್ತಿಗೆ ಭಗವದ್ಗೀತೆಯನ್ನು ಸಾರುತ್ತಾನೆ ಎಂದರು. ಕೃಷ್ಣ ಜನ್ಮಾಷ್ಟಮಿಗೆ ತನ್ನದೇಯಾದ ಶ್ರೀಮಂತ ಇತಿಹಾಸವಿದೆ ಒಳ್ಳೆಯ ಕಾರ್ಯಗಳಿಗೆ ಜನ್ಮಾಷ್ಟಮಿ ಪ್ರೇರಣೆಯಾಗುತ್ತದೆ, ದುಷ್ಟ ಕೃತ್ಯಗಳನ್ನು ನಾಶ ಮಾಡಲು ಕೃಷ್ಣನ ಬೋಧನೆಗಳು ನೆರವಾಗುತ್ತವೆ. ಜೀವನದಲ್ಲಿ ನಾವು ಒಳ್ಳೆಯದನ್ನ ಕಲಿಬೇಕೆಂದರೆ ಶ್ರೀಕೃಷ್ಣ ಪರಮಾತ್ಮನ ಸಂದೇಶಗಳನ್ನ ತಿಳಿದುಕೊಳ್ಳಬೇಕು ಎಂದು ಶರ್ಮಾ ಅವರು ತಿಳಿಸಿದರು. ಬಳಿಕ ಮಾತನಾಡಿದ ಸರ್ಕಾರಿ ನೌಕರರಾದ ಗೌತಮಿ ಅವರು ಕೃಷ್ಣನ ನಾನಾ ಅವತಾರ ಕಣ್ತುಂಬಿಕೊಳ್ಳಲು ಕೃಷ್ಣ ಜನ್ಮಾಷ್ಟಮಿಯೇ ಸಾಕು ಈ ದಿನ ಕೃಷ್ಣನ ವೇಷಭೂಷಣ ಹಾಕಿಕೊಳ್ಳುತ್ತೇವೆ, ಸ್ತೋತ್ರಗಳನ್ನು ಪಠಿಸುತ್ತೇವೆ ಮತ್ತು ಆರಾಧನೆ ಮಾಡುತ್ತೇವೆ ಇದರಿಂದ ನಮಗೆ ನೆಮ್ಮದಿ ಸಿಗುತ್ತದೆ ಜೊತೆಗೆ ಪರಮಾತ್ಮನನ್ನ ಸ್ಮರಿಸುತ್ತೇವೆ ಎಂದರು.

### ಚರ್ಮ ವಸ್ತು ಮೇಲೆ ರಿಯಾಯಿತಿ

» ದಾವಣಗೆರೆ

ಗೌರಿ ಗಣೇಶ ಹಬ್ಬದ ಪ್ರಯುಕ್ತ ಲಿಡಕರ್ ನಿಗಮದಿಂದ ಸೆಪ್ಟೆಂಬರ್ 6 ರವರೆಗೆ ಎ.ವಿ.ಕೆ ಕಾಲೇಜ್ ರಸ್ತೆಯಲ್ಲಿನ ಮಳಿಗೆಯಲ್ಲಿ ಅಪ್ಪಟ ಚರ್ಮದ ಪಾದರಕ್ಷೆ ಶೂ. ಬೆಲ್ಟ್, ಪರ್ಸ್, ಮಹಿಳೆಯರ ಪರ್ಸ್, ವ್ಯಾನಟಿ ಬ್ಯಾಗ್‌ಗಳು ಹೊಸ ಮಾದರಿಯಿಂದ ಲಭ್ಯವಿದ್ದು ಈ ಆಯ್ಕೆ ದಾಸ್ತಾನುಗಳ ಮೇಲೆ ಶೇ.20 ರಿಂದ ಶೇ.40 ರಷ್ಟು ರಿಯಾಯತಿ ಮಾರಾಟ ಇರುತ್ತದೆ ಎಂದು ಡಾ ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಜಿಲ್ಲಾ ಸಂಯೋಜಕರು ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ವಿವಿಧ ಕಾಮಗಾರಿಗಳಿಗೆ ಶಾಸಕ ಚಂದ್ರಪ್ಪ ಭೂಮಿ ಪೂಜೆ

» ಹೊಳಲ್ಕೆರೆ





ಎಲ್ಲರನ್ನು ಸಮಾನವಾಗಿ ಕಾಣಬೇಕೆಂಬ ದೃಷ್ಟಿಯಿಂದ ಯಾವುದೇ ಜಾತಿ ತಾರತಮ್ಯ ಮಾಡದೆ ಎಲ್ಲರಿಗೂ ಸಾಮಾಜಿಕ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ತಾಲ್ಲೂಕಿನ ಚಿಕ್ಕಜಾಜೂರು ಕಾವಲ್ ಗ್ರಾಮದಲ್ಲಿ ಒಂದು ಕೋಟಿ 35 ಲಕ್ಷ ರೂ. ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು.

ದೇಶಕ್ಕೆ ಸ್ವಾತಂತ್ರ್ಯ ಬಂದು 78 ವರ್ಷಗಳಾಗಿದೆ. ಅನೇಕ ಶಾಸಕರುಗಳು ಕ್ಷೇತ್ರದಲ್ಲಿ ಬಂದು ಹೋಗಿದ್ದಾರೆ. ಆದರೆ ರಸ್ತೆಗಳು ಮಾತ್ರ ಆಗಿರಲಿಲ್ಲ. ನಾನು ಶಾಸಕನಾದಾಗಿನಿಂದಲೂ ತಾಲ್ಲೂಕಿನ 493 ಹಳ್ಳಿಗಳಲ್ಲಿಯೂ ಗುಣಮಟ್ಟದ ರಸ್ತೆಗಳನ್ನು ನಿರ್ಮಿಸಿದ್ದೇನೆ. ಹೆಣ್ಣು ಮಕ್ಕಳು ಬೀದಿಗೆ ಬಂದು ನೀರು ಹಿಡಿಯಬಾರದೆಂದು ಟ್ಯಾಂಕ್ ಕಟ್ಟಿಸಿದ್ದೇನೆ. ಚಿಕ್ಕಜಾಜೂರಿನಿಂದ ಚಿತ್ರಹಳ್ಳಿವರೆಗೆ ಹೈಟೆಕ್ ರಸ್ತೆ ಮಾಡಿಸಿದ್ದೇನೆ. ಇನ್ನು ನೂರು ವರ್ಷಗಳಾದರೂ ಒಂದು ಚಿಕ್ಕ ಗುಂಡಿಯೂ ಬೀಳುವುದಿಲ್ಲ. ಚುನಾವಣೆಯಲ್ಲಿ ನನಗೆ ಮತ ನೀಡಿ ಗೆಲ್ಲಿಸಿದ ಪುಣ್ಯಾತ್ಮರ ಋಣ ತೀರಿಸಬೇಕೆಂಬುದನ್ನು ಗಮನದಲ್ಲಿಟ್ಟುಕೊಂಡು ಕ್ಷೇತ್ರದಲ್ಲಿ ಯಾರು ಕೇಳಲಿ ಬಿಡಲಿ ಎಲ್ಲಿ ಏನೇನು ಸಮಸ್ಯೆಗಳಿದೆ ಎನ್ನುವುದನ್ನು ತಿಳಿದುಕೊಂಡು ಹಗಲು-ರಾತ್ರಿ ಅಭಿವೃದ್ದಿಗೆ ಶ್ರಮಿಸುತ್ತಿದ್ದೇನೆ ಮಸೀದಿ ಕಟ್ಟಲು ಐವತ್ತು ಲಕ್ಷ ರೂ.ಗಳನ್ನು ನೀಡಿದ್ದೇನೆಂದು ಹೇಳಿದರು.

ಕೊಲ್ಲಾಪುರದಮ್ಮ ದೇವಸ್ಥಾನದ ಮುಂದಿನ ಗೋಕಟ್ಟೆಗೆ ಒಂದು ಕೋಟಿ ರೂ.ಗಳನ್ನು ಕೇಳಿದ್ದಿರಿ. ನಾನು ಒಂದುವರೆ ಕೋಟಿ ರೂ.ಗಳನ್ನು ನೀಡಿದ್ದೇನೆ. ಇನ್ನು ನಾಲ್ಕು ವರ್ಷಗಳ ಕಾಲ ಅಧಿಕಾರದಲ್ಲಿರುತ್ತೇನೆ. ಸರ್ಕಾರದಿಂದ ಅನುದಾನ ತಂದು ಕ್ಷೇತ್ರದ ಅಭಿವೃದ್ದಿಪಡಿಸುತ್ತೇನೆ. ತಲೆ ಕೆಡಿಸಿಕೊಳ್ಳುವುದು ಬೇಡ ಎಂದು ಮತದಾರರಿಗೆ ಭರವಸೆ ನೀಡಿದರು.

ಚಿಕ್ಕಜಾಜೂರು ಹತ್ತಿರ ಹಳ್ಳಕ್ಕೆ ಚೆಕ್‌ಡ್ಯಾಂ ನಿರ್ಮಿಸಲು ಒಂದು ಕೋಟಿ 37 ಲಕ್ಷ ರೂ. ಚಿಕ್ಕಜಾಜೂರು ಕಾವಲ್ ಗ್ರಾಮದ ಹತ್ತಿರ ಹಳ್ಳಕ್ಕೆ ಚೆಕ್‌ಡ್ಯಾಂ ಕಂ ಬ್ರಿಡ್ಜ್ ನಿರ್ಮಾಣ ಕಾಮಗಾರಿಗೆ ಒಂದು ಕೋಟಿ 39 ಲಕ್ಷ ರೂ. ಹಾಗೂ ಚಿಕ್ಕಜಾಜೂರು ಕಾವಲ್ ಗ್ರಾಮದ ಹತ್ತಿರ ಹೊಸ ಜಿನುಗು ಕೆರೆ ನಿರ್ಮಾಣಕ್ಕೆ 92 ಲಕ್ಷ ರೂ. ಚಿಕ್ಕಜಾಜೂರು ಗ್ರಾಮದ ಜಿನುಗು ಕೆರೆ ಅಭಿವೃದ್ಧಿ ಕಾಮಗಾರಿಗೆ ಇದೆ ಸಂದರ್ಭದಲ್ಲಿ ಭೂಮಿ ಪೂಜೆ ನೆರವೇರಿಸಿದರು.

ಚಿಕ್ಕಜಾಜೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅಂಜಲಿ ಮೋಹನ್, ಉಪಾಧ್ಯಕ್ಷ ನಾಗರಾಜ್, ಸದಸ್ಯರುಗಳಾದ ಜಮೀರ್‌ಭಾಷ, ಬಾಬು, ಶ್ರೀಕಾಂತ್, ಶ್ರೀಮತಿ ಲಕ್ಷ್ಮಿ, ಕರೀಂಭಾಷ, ಡಿ.ಸಿ.ಮೋಹನ್, ಕೃಷ್ಣಮೂರ್ತಿ, ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್ ನಾಗರಾಜ್ ಮತ್ತು ಗ್ರಾಮದ ಮುಖಂಡರು ಈ ಸಂದರ್ಭದಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

» **ದಾವಣಗೆರೆ**

ಅಂಚೆ ಇಲಾಖೆಯಿಂದ 6 ರಿಂದ 9 ನೇ ತರಗತಿ ವಿದ್ಯಾರ್ಥಿಗಳಿಗೆ ಅಂಚೆ ಚೀಟಿಗಳ ಸಂಗ್ರಹಕ್ಕೆ ಉತ್ತೇಜಿಸಲು 'ದೀನ್ ದಯಾಳ ಸ್ಪರ್ಶ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಅಂಚೆ ಚೀಟಿಗಳ ಮೌಲ್ಯ ಮತ್ತು ಸಂಶೋಧನೆಯ ಕುರಿತಾದ ಹವ್ಯಾಸ ಬೆಳೆಸಲು ವಿದ್ಯಾರ್ಥಿವೇತನ ನೀಡಲಾಗುವುದು. ಚಿಕ್ಕ ವಯಸ್ಸಿನಲ್ಲಿ ಮಕ್ಕಳಲ್ಲಿ ಅಂಚೆ ಚೀಟಿಗಳ ಸಂಗ್ರಹ ಉತ್ತೇಜನದ ಮೂಲಕ ಸದಾಭಿರುಚಿಯ ಆರೋಗ್ಯ ಪೂರ್ಣ ಜ್ಞಾನಾಧಾರಿತ ಹವ್ಯಾಸ ಬೆಳೆಸುವ್ವದು ಇದರ ಉದ್ದೇಶವಾಗಿದೆ. 2023-24 ನೇ ಶೈಕ್ಷಣಿಕ ವರ್ಷದಲ್ಲಿ ಶೇ 60ರಷ್ಟು ಅಂಕ ಪಡೆದಿರಬೇಕು ಮತ್ತು ಅಂಚೆ ಚೀಟಿಗಳ ಠೇವಣಿ ಖಾತೆಯನ್ನು ಅಥವಾ ಶಾಲೆಗಳ ಅಂಚೆ ಚೀಟಿ ಕ್ಲಬ್ ಸದಸ್ಯರಾಗಿರಬೇಕು. ಅಂಚೆ ಚೀಟಿಗಳ ಸಂಗ್ರಹದ ರಸಪ್ರಶ್ನೆ ಮತ್ತು ಯೋಜನೆ ಕಾರ್ಯದ ಆಧಾರದ ಮೇಲೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುತ್ತಿದ್ದು, ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರತಿ ವರ್ಷ 6 ಸಾವಿರ ವಿದ್ಯಾರ್ಥಿವೇತನ ನೀಡಲಾಗುತ್ತದೆ. ಅರ್ಜಿ ಸಲ್ಲಿಸಲು ಸೆ.3 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗೆ www.indiapost.gov.in ಅಥವಾ www.karnatakapost.gov.in 8861126883 2019146755, 08192-236277 ಸಂಖ್ಯೆಗಳಿಗೆ ಸಂಪರ್ಕಿಸಬಹುದೆಂದು ಅಂಚೆ ಇಲಾಖೆ ಅಧೀಕ್ಷಕರಾದ ಚಂದ್ರಶೇಖರ ತಿಳಿಸಿದ್ದಾರೆ.

### ಹೊಲಿಗೆ ಯಂತ್ರ ಖರೀದಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ಹೊಲಿಗೆ ತರಬೇತಿ ಪಡೆದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಸಮುದಾಯಕ್ಕೆಸೇರಿದ ಮಹಿಳಾ ಫಲಾನುಭವಿಗಳಿಗೆ ಹೊಲಿಗೆ ಯಂತ್ರ ಖರೀದಿಸಿ ವಿತರಿಸುವ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಮಹಾನಗರಪಾಲಿಕೆಯ ವೆಬ್‌ಸೈಟ್ www.davanagerecity.gov.in ಮೂಲಕ ಅಥವಾ ಕಚೇರಿಗೆ ಖುದ್ದು ಭೇಟಿ ನೀಡಿ ಎಲ್ಲಾ ದಾಖಲೆಗಳೊಂದಿಗೆ ಸೆ.26 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಲ್ಯಾಣ ಶಾಖೆ, ಮಹಾನಗರಪಾಲಿಕೆ, ದಾವಣಗೆರೆ (ಹಳೇ ಕಂದಾಯ ಶಾಖೆ ಕಟ್ಟಡ) ಇಲ್ಲಿ ಸಂಪರ್ಕಿಸಲು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ಕ್ರೀಡಾ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

2023 ನೇಸಾಲಿಗೆ ಜೀವಮಾನ ಸಾಧನೆ ಹಾಗೂ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಯೋಜಿಸುವ ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆಯನ್ನು ತೋರಿರುವ ರಾಜ್ಯದ ಕ್ರೀಡಾಪಟುಗಳಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ. ಹಾಗೂ ಗ್ರಾಮೀಣ ಪ್ರತಿಭೆಗಳಿಗೆ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ. ಅರ್ಹರು ವೆಬ್‌ಸೈಟ್: https://sevasindhuservices.karnataka.gov.in ನಲ್ಲಿ ಸೆಪ್ಟೆಂಬರ್ 20 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ 08192-237480 ಸಂಪರ್ಕಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ಜಯಲಕ್ಷ್ಮೀಬಾಯಿ ತಿಳಿಸಿದ್ದಾರೆ.

### ಪ್ರೋತ್ಸಾಹಧನ ನೀಡಲು ಅರ್ಜಿ ಆಹ್ವಾನ

» **ದಾವಣಗೆರೆ**

ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸ್ ಪಬ್ಲಿಕ್ ಪರೀಕ್ಷೆಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖಾ ವೆಬ್‌ಸೈಟ್ www.sw.kar.nic.in ನಲ್ಲಿ ಪ್ರೋತ್ಸಾಹಧನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ದ್ವಿತೀಯ ಪಿ.ಯು.ಸಿ., ಡಿಪ್ಲೊಮಾ, ಪದವಿ, ಸ್ನಾತಕೋತ್ತರ, ಬಿ.ಇ., ಮೆಡಿಕಲ್ ಕೋರ್ಸುಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಕಡ್ಡಾಯವಾಗಿ ಆಧಾರ್ ಸಂಖ್ಯೆಯನ್ನು ವಿದ್ಯಾರ್ಥಿಯ ಬ್ಯಾಂಕ್ ಖಾತೆ ಸಂಖ್ಯೆಯೊಂದಿಗೆ ಲಿಂಕ್ ಮಾಡಿಸುವ್ವದು, ಹಾಗೂ ಜಾತಿ ಪ್ರಮಾಣಪತ್ರ. ಅಂಕಪಟ್ಟಿ, ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್, ಆಧಾರ್ ಕಾರ್ಡ್ ಜೆರಾಕ್ಸ್‌ಗಳ ದೃಢೀಕೃತ ಪ್ರತಿ ಹಾಗೂ ಅರ್ಜಿ ಹಾಕಿದ ಪ್ರತಿಯನ್ನು ಪ್ರಾಂಶುಪಾಲರ ದೃಢೀಕರಣದೊಂದಿಗೆ ಸಂಬಂಧಿಸಿದ ತಾಲ್ಲೂಕುಗಳ ಸಹಾಯಕ ನಿರ್ದೇಶಕರ ಕಚೇರಿ ಅಥವಾ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. ಕೊಠಡಿ ಸಂಖ್ಯೆ: 37. ಮೊದಲನೇ ಮಹಡಿ, ಜಿಲ್ಲಾಡಳಿತ ಭವನ, ದಾವಣಗೆರೆ ಇವರನ್ನು ಸಂಪರ್ಕಿಸಲು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ನಾಗರಾಜ ತಿಳಿಸಿದ್ದಾರೆ.

# ಹಿರಿಯ ನಾಗರೀಕರಿಗೆ ಗುರುತಿನ ಚೀಟಿ ವಿತರಣೆ

» **ಚಿತ್ರದುರ್ಗ**



ಮುಪ್ಪಿನ ಕಾಲದಲ್ಲಿ ತಂದೆ ತಾಯಿಗಳನ್ನು ಮಕ್ಕಳು ಸರಿಯಾಗಿ ಆರೈಕೆ ಮಾಡದೆ ನಿರ್ಲಕ್ಷಿಸುತ್ತಿರುವುದರಿಂದ ಸರ್ಕಾರದ ಅನೇಕ ಸೌಲಭ್ಯಗಳು ಹಿರಿಯ ನಾಗರೀಕರಿಗೆ ಸಿಗಬೇಕೆಂದು ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎನ್.ವಾಸುದೇವರಾಮ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬಸವೇಶ್ವರ ವಿದ್ಯಾಸಂಸ್ಥೆ ಇವುಗಳ ಸಂಯುಕ್ತಾಶ್ರಯದಲ್ಲಿ ನಾಗರೀಕರ ಸಹಾಯವಾಣಿ ಕೇಂದ್ರ ಹಾಗೂ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದಲ್ಲಿ ಬುಧವಾರ ನಡೆದ ಹಿರಿಯ ನಾಗರೀಕರ ಮತ್ತು ವಿಕಲಚೇತನರಿಗೆ ಗುರುತಿನ ಚೀಟಿ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹಿರಿಯ ನಾಗರೀಕರಿಗೆ ಸರ್ಕಾರದಿಂದ ಏಕೆ ಸೌಲಭ್ಯ ಕೊಡಬೇಕು ಎನ್ನುವ ಪ್ರಶ್ನೆ ಉದ್ಭವವಾಗಿದೆ. ಮಕ್ಕಳಿಂದ ತಿರಸ್ಕಾರಕ್ಕೊಳಗಾಗುವ ತಂದೆ ತಾಯಿಗಳಿಗೆ ಸರ್ಕಾರದ ಸೌಲಭ್ಯಗಳು ನೆರವಿಗೆ ಬರುತ್ತವೆ. ಮನೆ ಕುಟುಂಬ ಎನ್ನುವ ಸಂಸ್ಕೃತಿಯನ್ನು ಮಕ್ಕಳಿಗೆ ಕಲಿಸಬೇಕೆಂದರು.

ಹೆಚ್ಚುವರಿ ರಕ್ಷಣಾಧಿಕಾರಿ ಕುಮಾರಸ್ವಾಮಿ ಮಾತನಾಡಿ ಹಿರಿಯ ನಾಗರೀಕರು ಸರ್ಕಾರದಿಂದ ಸೌಲಭ್ಯಗಳನ್ನು ಪಡೆಯಬೇಕಾದರೆ ಗುರುತಿನ ಚೀಟಿ ಅತ್ಯವಶ್ಯಕ. ಅರವತ್ತು ವರ್ಷವಾಗಿದೆ ಎಂದು ಬಾಯಲ್ಲಿ ಹೇಳಿದರೆ ನಂಬುವುದು ಕಷ್ಟ. ಅದಕ್ಕಾಗಿ ಹಿರಿಯ ನಾಗರೀಕರು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಪಡೆದುಕೊಳ್ಳುವುದು ಒಳ್ಳೆಯದು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಶ್ರೀಮತಿ ಭಾರತಿ ಆರ್.ಬಣಕಾರ್ ಮಾತನಾಡುತ್ತ ಹಿರಿಯ ನಾಗರೀಕರಿಗೆ ಈಗಾಗಲೆ ಸರ್ಕಾರ ಅನೇಕ ಸೌಲಭ್ಯಗಳನ್ನು ಕೊಡುತ್ತಿದೆ. ವಯಸ್ಸಾದ ತಂದೆ-ತಾಯಿಯನ್ನು ಮಕ್ಕಳು ಕೀಳಾಗಿ ನೋಡುತ್ತಿರುವುದರಿಂದ ವೃದ್ದಾಶ್ರಮಗಳು ಜಾಸ್ತಿಯಾಗುತ್ತಿವೆ. ಹಿರಿಯ ನಾಗರೀಕರಿಗೆ ಏನೆ ತೊಂದರೆಯಾದರೂ ರಕ್ಷಣೆ ಕೊಡಬೇಕು. ಹಿರಿಯರು ಮಕ್ಕಳ ಒಳಿತಿಗಾಗಿ ಜೀವ ಸವೆಸುತ್ತಾರೆ. ವಿಪರ್ಯಾಸವೆಂದರೆ ಇಂದಿನ ಮಕ್ಕಳಲ್ಲಿ ಸಂಸ್ಕೃತಿ, ಸಂಸ್ಕಾರ ಎನ್ನುವುದು ಕಳೆದು ಹೋಗುತ್ತಿದೆ. ಮಿತವಾದ ವ್ಯಾಯಾಮ ಮಾಡಿ ಆರೋಗ್ಯದ ಬಗ್ಗೆ ಕಾಳಜಿ ವಹಿಸುವಂತೆ ಸಲಹೆ ನೀಡಿದರು.

ಹಿರಿಯ ನಾಗರೀಕರ ಸಹಾಯವಾಣಿ ಕೇಂದ್ರ ಮತ್ತು ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದ ಕಾರ್ಯದರ್ಶಿ ವಿ.ಕೆ.ಶಂಕರಪ್ಪ ಮಾತನಾಡಿ ಹಿರಿಯ ನಾಗರೀಕರಿಗೆ, ವಿಶೇಷ ಚೇತನರಿಗೆ ಸಮಾಜದ ಕಟ್ಟಕಡೆಯವರಿಗೆ ಸರ್ಕಾರದ ಸವಲತ್ತುಗಳು ಸಿಗಬೇಕಾದರೆ ಗುರುತಿನ ಚೀಟಿಯನ್ನು ಪಡೆದುಕೊಳ್ಳಬೇಕು. ಕಳೆದ 26 ವರ್ಷಗಳಿಂದಲೂ ವಿಕಲಚೇತನರು ಹಾಗೂ ಹಿರಿಯ ನಾಗರೀಕರಿಗೆ ಸೇವೆ ಸಲ್ಲಿಸುತ್ತ ಬರುತ್ತಿದ್ದೇವೆ. ಹದಿನೈದು ವಿಕಲಚೇತರನ್ನು ಬೆಂಗಳೂರಿನ ಇನ್‌ಫೋಸಿಸ್‌ನಲ್ಲಿ ಕೆಲಸಕ್ಕೆ ಸೇರಿಸಲಾಗಿದೆ. ಮಕ್ಕಳಿಂದ ತೊಂದರೆ ಅನುಭವಿಸುತ್ತಿರುವ ಹಿರಿಯ ನಾಗರೀಕರಿಗೆ ನಮ್ಮ ಸಂಸ್ಥೆಯಲ್ಲಿ ಆಶ್ರಯ ನೀಡುತ್ತಿದ್ದೇವೆಂದು ಹೇಳಿದರು.

ಲೋಕಾಯುಕ್ತ ಡಿ.ವೈ.ಎಸ್ಪಿ. ಎನ್.ಮೃತ್ಯುಂಜಯ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಡಿ.ಸಿ.ಸೋಮಶೇಖರ, ಶ್ರೀಮತಿ ಪ್ರಭಾವತಿ ಎಸ್.ಕೆ. ಉಪ ವಿಭಾಗಾಧಿಕಾರಿ ಕಚೇರಿಯ ರಾಮಪ್ರಸಾದ್ ವೇದಿಕೆಯಲ್ಲಿದ್ದರು.

# ಜಾನುವಾರು ಗಣತಿ ತರಬೇತಿಗೆ ಚಾಲನೆ

» **ಚಿತ್ರದುರ್ಗ**



ಜಾನುವಾರುಗಳ ಗಣತಿಯನ್ನು ಪಕ್ವತೆ ಹಾಗೂ ನಿಖರವಾಗಿ ಮಾಡಿದಾಗ ಸರ್ಕಾರ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಸುಲಭವಾಗುತ್ತದೆಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ವತಿಯಿಂದ ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ಜಾನುವಾರು ಗಣತಿದಾರರಿಗೆ ಹಾಗೂ ಮೇಲ್ವಿಚಾರಕರಿಗೆ ಮಂಗಳವಾರ ಏರ್ಪಡಿಸಲಾಗಿದ್ದ ತರಬೇತಿ ಉದ್ಘಾಟಿಸಿ 21 ನೇ ಜಾನುವಾರು ಗಣತಿ ಸೂಚನಾ ಕೈಪಿಡಿ ಬಿಡುಗಡೆಗೊಳಿಸಿ ಮಾತನಾಡಿದರು.

ಯಾವುದೇ ಒಂದು ಗಣತಿ ದೇಶದ ಕಾರ್ಯ ಯೋಜನೆ ರೂಪಿಸಿ ಅನುಷ್ಠಾನಗೊಳಿಸಲು ಸಹಾಯವಾಗುತ್ತದೆ. ಹಾಗಾಗಿ ನಿಸ್ಪಕ್ಷಪಾತ, ನಿರ್ಧಿಷ್ಟವಾಗಿರಬೇಕು. ಆಗ ಮಾತ್ರ ಜನರ ಜೀವನ ಮಟ್ಟ ಸುಧಾರಿಸಲು ಸಾಧ್ಯ. ಆಧುನಿಕ ಯುಗದಲ್ಲಿ ಜಾನುವಾರುಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಜಾನುವಾರುಗಳು ಇಲ್ಲದಿದ್ದರೆ ರೈತರಿಲ್ಲ. ಕುರಿ, ಮೇಕೆ, ಹಸು, ಎಮ್ಮೆ ಇವುಗಳನ್ನು ಸಾಕುವುದರಿಂದ ಹಾಲು ಗೊಬ್ಬರ ಸಿಗುತ್ತದೆ. ಮನುಷ್ಯರೊಡನೆ ಪ್ರಾಣಿಗಳ ಬಾಂಧವ್ಯ ಮುಖ್ಯ ಎಂದು ತಿಳಿಸಿದರು.

ಕೃಷಿ ಪ್ರಧಾನ ದೇಶದಲ್ಲಿ ಜಾನುವಾರುಗಳಿಗೆ ಪ್ರಾಮುಖ್ಯತೆ ಕೊಡಬೇಕು. ಕಂದಾಯ ಹಾಗೂ ಪಶುಪಾಲನಾ ಇಲಾಖೆ ಒಂದಕ್ಕೊಂದು ಪೂರಕ. ಅಮೃತ ಮಹಲ್ ಕಾವಲು ಒತ್ತುವರಿಯಾಗುತ್ತಿರುವುದನ್ನು ರಕ್ಷಿಸಬೇಕಿದೆ. ಸೆ.1 ರಿಂದ ಡಿಸೆಂಬರ್‌ವರೆಗೆ ಜಾನುವಾರುಗಳ ಗಣತಿಯನ್ನು ಮಾಡಲು ಅವಕಾಶವಿದೆ. ಒಂದು ಮನೆಯನ್ನು ಬಿಡದೆ ಜಾನುವಾರುಗಳ ಗಣತಿಯಾಗಬೇಕು. ಪಶುಸಂಗೋಪನೆ ರೈತರ ಜೀವನಕ್ಕೆ ಅವಿಭಾಜ್ಯ ಅಂಗವಾಗಿರುವುದರಿಂದ ಎಲ್ಲಿಯೂ ಗೊಂದಲಕ್ಕೆ ಆಸ್ಪದ ಕೊಡದೆ ಗಣತಿ ಮಾಡಿ ಎಂದು ಜಾನುವಾರು ಗಣತಿದಾರರಿಗೆ ಹಾಗೂ ಮೇಲ್ವಿಚಾರಕರುಗಳಿಗೆ ಅಪರ ಜಿಲ್ಲಾಧಿಕಾರಿ ಕರೆ ನೀಡಿದರು.

ಪಶುಪಾಲನಾ ಇಲಾಖೆಯ ಉಪ ನಿರ್ದೇಶಕ ಡಾ.ಎನ್.ಕುಮಾರ್ ಮಾತನಾಡುತ್ತ 1919 ರಲ್ಲಿ ಜಾನುವಾರು ಗಣತಿ ಆರಂಭಗೊಂಡಿದ್ದು, ಪ್ರತಿ ಐದು ವರ್ಷಗಳಿಗೊಮ್ಮೆ ಜಾನುವಾರುಗಳ ಗಣತಿ ಕಾರ್ಯ ನಡೆಯಲಿದೆ. ಗಣತಿ ಆಧಾರದ ಮೇಲೆ ಸರ್ಕಾರ ಬಜೆಟ್ ಸಿದ್ದಪಡಿಸಿ ಯೋಜನೆಗಳನ್ನು ರೂಪಿಸಲು ಸಹಕಾರಿಯಾಗಲಿದೆ. ಗಣತಿಗೆ ನಾಲ್ಕು ತಿಂಗಳ ಅವಧಿಯಿದ್ದು, ನಿಖರತೆಯಿಂದ ಕೂಡಿರಬೇಕು. ಕೃಷಿ ಪ್ರಧಾನವಾದ ಭಾರತದಲ್ಲಿ ಜಾನುವಾರುಗಳ ಅವಶ್ಯಕತೆ ಬಹಳಷ್ಟಿದೆ. ಪ್ರತಿ ಮನೆ ಮನೆಗೆ ಭೇಟಿ ನೀಡಿ ಆಪ್ ಮೂಲಕ ಮಾಹಿತಿ ಸಂಗ್ರಹಿಸಿ ಎಂದು ತಿಳಿಸಿದರು.

ಪಾಲಿ ಕ್ಲಿನಿಕ್ ಉಪನಿರ್ದೇಶಕ ಡಾ.ಹರೀಶ್ ಎಸ್.ಎನ್. ಪಶುಪಾಲನಾ ಇಲಾಖೆ ಸಹಾಯಕ ನಿರ್ದೇಶಕ ಡಾ.ತಿಪ್ಪೇಸ್ವಾಮಿ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಅಂಕಿ ಅಂಶಗಳ ಸಹಾಯಕ ನಿರ್ದೇಶಕಿ ಶ್ರೀಮತಿ ನೂರ್‌ಜಾನ್ ವೇದಿಕೆಯಲ್ಲಿದ್ದರು.

## ಗೌರಸಮುದ್ರ ಮಾರಮ್ಮದೇವಿ ಹುಂಡಿಯಲ್ಲಿ 10.66.441 ಹಣ ಸಂಗ್ರಹ



**ಚಳ್ಳಕೆರೆ:** ತಾಲ್ಲೂಕಿನ ತಳಕು ಹೋಬಳಿಯ ಗೌರಸಮುದ್ರ ಶ್ರೀಮಾರಮ್ಮದೇವಿ ಜಾತ್ರೆ ಸೆ.2ರಿಂದ4ರ ತನಕ ನಡೆಯಲಿದ್ದು, ಜಾತ್ರೆಯ ಅಂಗವಾಗಿ ದೇವಸ್ಥಾನದ ಹುಂಡಿಹಣವನ್ನು ತಾಲ್ಲೂಕಿನ ಮುಜುರಾಯಿ ಅಧಿಕಾರಿಗಳು ಹಾಗೂ ತಹಶೀಲ್ದಾರ್ ರೇಹಾನ್‌ಪಾಷ ಸಮ್ಮುಖದಲ್ಲಿ ಏಣಿಕೆ ಮಾಡಲಾಯಿತು. ಬೆಳಗ್ಗೆ ಸುಮಾರು 10ಕ್ಕೆ ಪ್ರಾರಂಭವಾದ ಹುಂಡಿ ಹಣ ಏಣಿಕೆ ಕಾರ್ಯ ಮಧ್ಯಾಹ್ನ 3ರ ತನಕ ನಡೆದಿದ್ದು, ತಾಲ್ಲೂಕು ಕಚೇರಿ ಸಿಬ್ಬಂದಿ ಹಾಗೂ ದೇವಸ್ಥಾನ ಮುಖಂಡರು ಏಣಿಕೆ ಕಾರ್ಯದಲ್ಲಿ ಭಾಗವಹಿಸಿದ್ದರು. ಅಂತಿಮವಾಗಿ 10.66,441ರೂ ಹಣ ಹುಂಡಿಯಲ್ಲಿ ಶೇಖರಣೆಯಾಗಿದ್ದು, ಸದರಿ ಹಣವನ್ನು ಬ್ಯಾಂಕ್‌ಗೆ ಜಮಾ ಮಾಡಲಾಗಿದೆ ಎಂದು ತಹಶೀಲ್ದಾರ್ ತಿಳಿಸಿದರು. ಗೌರಸಮುದ್ರ ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಲೆಕ್ಕಿಗ ಪ್ರಕಾಶ್, ಪಂಚಾಯಿತಿ ಸದಸ್ಯರು, ಅಧಿಕಾರಿಗಳು ಏಣಿಕೆ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

## ಮೈಲನಹಳ್ಳಿ ತಿಪ್ಪೇಸ್ವಾಮಿ ನೇಮಕ



**ಚಳ್ಳಕೆರೆ:** ಕರ್ನಾಟಕ ಮಾಧ್ಯಮ ಮಹಾಒಕ್ಕೂಟದ ರಾಜ್ಯ ಸಂಘಟನಾ ಕಾರ್ಯದರ್ಶಿಯಾಗಿ ಪತ್ರಕರ್ತ ಮೈಲನಹಳ್ಳಿತಿಪ್ಪೇಸ್ವಾಮಿಯವರನ್ನು ನೇಮಕ ಮಾಡಲಾಗಿದೆ ಎಂದು ರಾಜ್ಯಾಧ್ಯಕ್ಷ ಕೆ.ಶಿವಕುಮಾರ್ ತಿಳಿಸಿದ್ದಾರೆ. ಅವರು, ಇಲ್ಲಿನ ಪ್ರವಾಸಿಮಂದಿರದಲ್ಲಿ ನಡೆದ ಸಭೆಯಲ್ಲಿ ನೇಮಕ ಪತ್ರವನ್ನು ಅಧ್ಯಕ್ಷ ಶಿವಕುಮಾರ್ ನೂತನ ರಾಜ್ಯ ಸಂಘಟನಾ ಕಾರ್ಯದರ್ಶಿಗೆ ನೀಡಿ, ಮಹಾಒಕ್ಕೂಟದ ಸಂಘಟನೆಗೆ ನಿರಂತರ ಶ್ರಮಿಸುವಂತೆ ಕಿವಿ ಮಾತು ಹೇಳಿದರು. ಮೈಲನಹಳ್ಳಿತಿಪ್ಪೇಸ್ವಾಮಿ ಮಾತನಾಡಿ, ಕರ್ನಾಟಕ ಮಾಧ್ಯಮ ಮಹಾಒಕ್ಕೂಟ ನನಗೆ ರಾಜ್ಯಮಟ್ಟದ ಜವಾಬ್ದಾರಿಯನ್ನು ನೀಡಿದೆ. ನಾನು ಸಹ ಎಲ್ಲಾ ಜಿಲ್ಲೆಗಳಲ್ಲಿ ಪ್ರವಾಸ ಮಾಡಿ ಮಾಧ್ಯಮ ಒಕ್ಕೂಟದ ಬಲವರ್ಧನೆಗೆ ಪ್ರಾಮಾಣಿಕವಾಗಿ ಶ್ರಮಿಸುವ ಭರವಸೆ ನೀಡಿದರು.

## ಬಾಪೂಜಿ ಸ್ಕೂಲ್‌ನಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ



**ಚಿತ್ರದುರ್ಗ :** ಬಾಪೂಜಿ ಪಬ್ಲಿಕ್ ಇಂಟರ್ ನ್ಯಾಷನಲ್ ಸ್ಕೂಲ್‌ನಲ್ಲಿ ಕೃಷ್ಣಜನ್ಮಾಷ್ಟಮಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಕೈಯಲ್ಲಿ ಕೊಳಲು ಹಿಡಿದು ಶ್ರೀಕೃಷ್ಣನ ವೇಷಭೂಷಣ ತೊಟ್ಟಿದ್ದ ಪುಟಾಣಿ ಮಕ್ಕಳು ಹಾಗೂ ರಾಧೆ ವೇಷದಲ್ಲಿದ್ದ ಚಿಣ್ಣರು ಎಲ್ಲರ ಗಮನ ಸೆಳೆದರು. ಇಸ್ಕಾನ್ ಗುರುಗಳಾದ ಕಲ್ಯಾಣ್‌ದಾಸ್, ಮಹಾಬಲೇಶ್, ಪ್ರಭು ತಂಡದವರು ಶ್ರೀಕೃಷ್ಣ ಜನ್ಮಾಷ್ಟಮಿಯಲ್ಲಿ ಭಾಗವಹಿಸಿ ಶ್ರೀಕೃಷ್ಣನ ಲೀಲೆ, ಮೌಲ್ಯಗಳನ್ನು ಮಕ್ಕಳಿಗೆ ತಿಳಿಸಿದರು.ಬಾಪೂಜಿ ಸಮೂಹ ಶಿಕ್ಷಣ ಮಹಾವಿದ್ಯಾಲಯದ ಕಾರ್ಯದರ್ಶಿ ಡಾ.ಕೆ.ಎಂ.ವೀರೇಶ್, ನಿರ್ದೇಶಕ ಕೆ.ಎಂ.ಚೇತನ್, ಮುಖ್ಯೋಪಾಧ್ಯಾಯರು, ಶಿಕ್ಷಕರುಗಳು, ಮಕ್ಕಳ ಪೋಷಕರುಗಳು ಶ್ರೀಕೃಷ್ಣ ಜಯಂತಿಯಲ್ಲಿ ಪಾಲ್ಗೊಂಡಿದ್ದರು.

## ಮಾತೃಶ್ರೀ ಸಂಸ್ಥೆಯಲ್ಲಿ ಕೃಷ್ಣ ಜನ್ಮಾಷ್ಟಮಿ



**ಚಿತ್ರದುರ್ಗ:** ಸ್ಟೇಡಿಯಂ ರಸ್ತೆಯಲ್ಲಿರುವ ಮಾತೃಶ್ರೀ ವಿದ್ಯಾಸಂಸ್ಥೆಯಲ್ಲಿ ಶ್ರೀಕೃಷ್ಣಜಯಂತಿಯನ್ನುಸಡಗರಸಂಭ್ರಮಗಳಿಂದಆಚರಿಸಲಾಯಿತು. ಪುಟಾಣಿ ಮಕ್ಕಳು ಶ್ರೀಕೃಷ್ಣ ಹಾಗೂ ರಾಧೆಯ ವೇಷ ಧರಿಸಿ ಶ್ರೀಕೃಷ್ಣ ಜನ್ಮಾಷ್ಟಮಿಯ ಸಂಭ್ರಮದಲ್ಲಿ ಮಿಂದೆದ್ದರು. ಮಾತೃಶ್ರೀ ವಿದ್ಯಾಸಂಸ್ಥೆಯ ಸಂಸ್ಥಾಪಕ ಡಾ.ವಿ.ಎಲ್.ಪ್ರಶಾಂತ್ ಮಾತನಾಡಿ ಶ್ರೀಕೃಷ್ಣ ಬಾಲ್ಯದಲ್ಲಿಯೇ ಅತ್ಯಂತ ತುಂಟಾಟ ಮಾಡುತ್ತಿದ್ದರಿಂದ ಎಲ್ಲರಿಗೂ ಅಚ್ಚುಮೆಚ್ಚಿನವನಾಗಿದ್ದ. ಹಾಗಾಗಿ ಶ್ರೀಕೃಷ್ಣನ ಮೌಲ್ಯಗಳನ್ನು ಮಕ್ಕಳು ತಿಳಿದುಕೊಂಡಿರಬೇಕೆಂದು ಹೇಳಿದರು. ಶಾಲೆಯ ಸಿಬ್ಬಂದಿ ವರ್ಗದವರು ಶ್ರೀಕೃಷ್ಣ ಜನ್ಮಾಷ್ಟಮಿಯಲ್ಲಿ ಭಾಗವಹಿಸಿದ್ದರು.

**ಪ್ರಮುಖ ಸುದ್ದಿ**

# ಮಹಿಳಾ ಸೇವಾ ಸಮಾಜದ 95 ನೇ ವಾರ್ಷಿಕೋತ್ಸವ

» **ಚಿತ್ರದುರ್ಗ**



ಮಹಿಳಾ ಸೇವಾ ಸಮಾಜ ಮಹಿಳೆಯರ ಅನುಕೂಲಕ್ಕಾಗಿಯೇ ವರ್ಷವಿಡಿ ಹತ್ತು ಹಲವಾರು ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದೆ ಎಂದು ಮಹಿಳಾ ಸೇವಾ ಸಮಾಜದ ಉಪಾಧ್ಯಕ್ಷೆ ಶ್ರೀಮತಿ ಮೋಕ್ಷರುದ್ರಸ್ವಾಮಿ ಹೇಳಿದರು.

ಮಹಿಳಾ ಸೇವಾ ಸಮಾಜದಲ್ಲಿ ನಡೆದ 95 ನೇ ವಾರ್ಷಿಕೋತ್ಸವ ಹಾಗೂ ಫ್ರೆಂಡ್‌ಶಿಪ್ ಡೇ ಉದ್ಘಾಟಿಸಿ ಮಾತನಾಡಿದರು.

ಬ್ರೆಸ್ಟ್ ಕ್ಯಾನ್ಸರ್ ಬಗ್ಗೆ ಬಸವೇಶ್ವರ ಆಸ್ಪತ್ರೆಯಲ್ಲಿ ಉಚಿತ ಆರೋಗ್ಯ ತಪಾಸಣೆ ನಡೆಸಿದೆ. ನೂರಾರು ಮಹಿಳೆಯರು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ. ಇದಲ್ಲದೆ ಹೃದಯ ಸಂಬಂಧಿ ಕಾಯಿಲೆ ಹಾಗೂ ರಕ್ತದೊತ್ತಡವನ್ನು ತಪಾಸಣೆ ಮಾಡಿಸಿ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳುವಂತೆ ಮಹಿಳೆಯರಲ್ಲಿ ಜಾಗೃತಿ ಮೂಡಿಸಲಾಗಿದೆ ಎಂದು ತಿಳಿಸಿದರು.ಅರವತ್ತು ಮಹಿಳೆಯರಿಗೆ ಬಸವೇಶ್ವರ ಆಸ್ಪತ್ರೆಯಲ್ಲಿ ಮ್ಯಾಮೊಗ್ರಫಿ ಹಾಗೂ ಪಾಪ್ಸ್ ಮಿಯರ್ ಉಚಿತ ತಪಾಸಣೆ ನಡೆಸಿದ್ದು, ಕೆಲವರಿಗೆ ಆಪರೇಷನ್ ಕೂಡ ಮಾಡಿಸಲಾಗಿದೆ. ಯಾವುದೇ ಪ್ರತಿಫಲ ಬಯಸದೆ ಸೇವಾ ಮನೋಭಾವನೆಯಿಂದ ಮಹಿಳಾ ಸೇವಾ ಸಮಾಜ ಕೆಲಸ ಮಾಡುತ್ತಿದೆ. ಒನಕೆ ಓಬವ್ವ ಬಾಲಿಕಾಶ್ರಮದ ರಿಪೇರಿ ನಡೆಯುತ್ತಿದೆ. ಅನೇಕ ಸಂಸಾರಗಳಲ್ಲಿ ಗಂಡ-ಹೆಂಡತಿ ನಡುವೆ ನಡೆಯುವ ಕಲಹಕ್ಕೆ ಸಂಬಂಧಿಸಿದಂತೆ ಕೌನ್ಸಿಲಿಂಗ್ ಮೂಲಕ ಒಂದುಗೂಡಿಸಲಾಗಿದೆ. ಒಟ್ಟಾರೆ ಮಹಿಳಾ ಸೇವಾ ಸಮಾಜ ಸಮಾಜಮುಖಿ ಕಾರ್ಯದಲ್ಲಿ ತೊಡಗಿದೆ ಎಂದರು.

ಸ್ನೇಹ ಎಂದರೆ ಬಿಡಿಸಲಾಗದ ಬಂಧನವಿದ್ದಂತೆ. ಅಮೂಲ್ಯವಾದ ಸ್ನೇಹದಲ್ಲಿ ಯಾವುದೇ ಬಿರುಕು ಬರದಂತೆ ಕಾಪಾಡಿಕೊಳ್ಳಬೇಕು. ಹಲವು ಸಂಬಂಧಗಳು ಜೀವನದಲ್ಲಿ ಬಂದು ಹೋಗುತ್ತವೆ. ಆದರೆ ಸ್ನೇಹ ಮಾತ್ರ ಶಾಶ್ವತವಾಗಿ ಉಳಿಯುತ್ತದೆ. ಹಾಗಾಗಿ ಸ್ನೇಹಕ್ಕೆ ತನ್ನದೆ ಆದ ಪ್ರಾಮುಖ್ಯತೆಯಿದೆ ಎಂದರು.

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾನಿಲಯದ ಶಿವರಶ್ಮಿ ಅಕ್ಕ ಮಾತನಾಡಿ ಮಹಿಳಾ ಸೇವಾ ಸಮಾಜ ಹಿಂದಿನಿಂದಲೂ ಮಹಿಳೆಯರಿಗೆ ಉಪಯುಕ್ತವಾಗುವ ಉತ್ತಮ ಕೆಲಸಗಳನ್ನು ಮಾಡಿಕೊಂಡು ಬರುತ್ತಿರುವುದು ನಿಜಕ್ಕೂ ಮೆಚ್ಚುವಂತದ್ದು, ಮಹಿಳಾ ಸಾಧಕಿಯರನ್ನು ಗುರುತಿಸಿ ಪ್ರತಿ ವರ್ಷ ಗೌರವಿಸಿ ಪ್ರೋತ್ಸಾಹಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ವೀಣ ವಿಜಯ್, ಮಾಳವಿಕ, ಮಹಾಂತಮ್ಮ, ರೂಪ ಜನಾರ್ಧನ್, ನಾಗರತ್ನ ವಿಶ್ವನಾಥಯ್ಯ ವೇದಿಕೆಯಲ್ಲಿದ್ದರು. ಉಮ ಗುರುರಾಜ್ ಸ್ವಾಗತಿಸಿದರು. ಲತಾ ಉಮೇಶ್ ವರದಿ ಮಂಡಿಸಿದರು. ಭಾರತಿ ಸುರೇಶ್ ನಿರೂಪಿಸಿದರು. ಆಶ್ರಯ ಕಮಿಟಿ ಸದಸ್ಯೆ ಮುನಿರಾ ಎ.ಮಕಾಂದಾರ್ ಇವರನ್ನು ಗೌರವಿಸಲಾಯಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T